MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ


ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಯುವ ಸ್ಫೂರ್ತಿ



ಮನುಷ್ಯರಲ್ಲಿ ಪರಿಪೂರ್ಣತೆಯನ್ನು ಹಿಗ್ಗಿಸುವುದೇ ಶಿಕ್ಷಣ
–ಸ್ವಾಮಿ ವಿವೇಕಾನಂದ

ಸಂಪುಟ: 04 | ಸಂಚಿಕೆ : 178 | ಮಂಗಳವಾರ: 29–04–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ:2–00

VOLUME: 04 | ISSUE: 178 | TUESDAY: 29–04–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಶಾಸಕರ ಅಮಾನತು ವಾಪಸ್ಸಿಗೆ ಬಿಜೆಪಿಯಿಂದ ರಾಜ್ಯಪಾಲರಿಗೆ ಮನವಿ

**ಬೆಂಗಳೂರು,ಏ.29–** ವಿಧಾನ ಸಭೆಯಿಂದ ಬಿಜೆಪಿಯ 18 ಶಾಸಕರನ್ನು ಅಮಾನತು ಮಾಡಿರುವುದನ್ನು ವಾಪಸ್ ಪಡೆಯುವಂತೆ ವಿಧಾನಸಭಾಧ್ಯಕ್ಷರಿಗೆ ಮಾರ್ಗದರ್ಶನ ಮಾಡಬೇಕು ಎಂದು ಕೋರಿ ಬಿಜೆಪಿ ಶಾಸಕರ ನಿಯೋಗ ರಾಜ್ಯಪಾಲರಿಗೆ ಮನವಿ ಮಾಡಿದೆ.



ಪ್ರತಿಪಕ್ಷ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಬಿಜೆಪಿ ಶಾಸಕರ ನಿಯೋಗ ಇಂದು ರಾಜಭವನದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿ ವಿಧಾನಸಭೆಯಿಂದ 18 ಬಿಜೆಪಿ ಶಾಸಕರ ಅಮಾನತು ವಾಪಸ್ ಪಡೆಯುವಂತೆ ವಿಧಾನಸಭಾಧ್ಯಕ್ಷರಿಗೆ ಮಾರ್ಗದರ್ಶನ ಮಾಡಿ ಎಂದು ಮನವಿ ಸಲ್ಲಿಸಿತು.

ವಿಧಾನಸಭೆಯಿಂದ 18 ಶಾಸಕರನ್ನು ಅಮಾನತು ಮಾಡಿರುವುದು ಪ್ರಜಾಪ್ರಭುತ್ವ ವಿರೋಧಿ ನಡೆಯಾಗಿದೆ. ಹಾಗಾಗಿ ಕೂಡಲೇ ಅಮಾನತು ಅನ್ನು ವಾಪಸ್ ಪಡೆಯುವಂತೆ ವಿಧಾನಸಭಾಧ್ಯಕ್ಷರಿಗೆ ಸೂಚಿಸಿ ಎಂದು ಬಿಜೆಪಿ ಶಾಸಕರ ನಿಯೋಗ ರಾಜ್ಯಪಾಲರಿಗೆ ಮನವಿ ಮಾಡಿತು. ವಿಧಾನಸಭೆಯಿಂದ 18 ಬಿಜೆಪಿ ಶಾಸಕರನ್ನು ಅಮಾನತು ಮಾಡಿ ಅವರ ಹಕ್ಕುಗಳನ್ನು ಮೊಟಕುಗಳಿಸಲಾಗಿದೆ. ಇದು ಸಂವಿಧಾನ ವಿರೋಧಿ ನಡೆ. ಹಾಗಾಗಿ ಸಭಾಧ್ಯಕ್ಷರಿಗೆ ಸೂಕ್ತ ಮಾರ್ಗದರ್ಶನ ಮಾಡಬೇಕು ಎಂದು ನಿಯೋಗ ಕೋರಿತು.

ಬಿಜೆಪಿ ಶಾಸಕರ ನಿಯೋಗದ ಮನವಿಯನ್ನು ಆಲಿಸಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

## ರೈಲ್ವೆ ನೇಮಕಾತಿ ಮಂಡಳಿ ಪರೀಕ್ಷೆ ಜನಿವಾರ, ಮಂಗಳಸೂತ್ರ ನಿರ್ಬಂಧ ಬೇಡ ಅಧಿಕಾರಿಗಳಿಗೆ ಸಚಿವರ ಸೂಚನೆ

**ಬೆಂಗಳೂರು ಏ.29–** ರೈಲ್ವೆ ನೇಮಕಾತಿ ಮಂಡಳಿಯ ನರ್ಸಿಂಗ್ ಸೂಪರ್ ಡೆಂಟ್ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ಮಂಗಳಸೂತ್ರ ಮತ್ತು ಜನಿವಾರಗಳನ್ನು ತೆಗಿಸದಂತೆ ರೈಲ್ವೆ ಖಾತೆ ರಾಜ್ಯ ಸಚಿವ ವಿ ಸೋಮಣ್ಣ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.ಈ ತಿಂಗಳ 28,29 ಮತ್ತು 30ರಂದು ರೈಲ್ವೆ ಇಲಾಖೆಯ ನರ್ಸಿಂಗ್ ಸೂಪರ್ ಡೆಂಟ್ ಹುದ್ದೆಗೆ ಪರೀಕ್ಷೆಗಳು ನಡೆಯಲಿದ್ದು ಈ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಜನಿವಾರ ಹಾಗೂ ಮಂಗಳಸೂತ್ರವನ್ನು ಧರಿಸಬಾರದು ಎಂದು ಪ್ರವೇಶ ಪತ್ರದಲ್ಲಿ ನಮೂದಿಸಲಾಗಿತ್ತು ಧಾರ್ಮಿಕ ಸಂಕೇತಗಳಾದ ಜನಿವಾರ ಮತ್ತು ಮಂಗಳಸೂತ್ರಗಳನ್ನ ತೆಗೆಯುವ ಬಗ್ಗೆ ರೈಲ್ವೆ ನೇಮಕಾತಿ ಪರೀಕ್ಷೆಯ ಪತ್ರ ಪ್ರವೇಶ ಪತ್ರದಲ್ಲಿ ನಮೂದಿಸಿರುವ ಬಗ್ಗೆ ಹಿಂದೂ ಪರ ಸಂಘಟನೆಗಳಿಂದ ವ್ಯಾಪಕ ಆಕ್ರೋಶ ವ್ಯಕ್ತವಾಗಿತ್ತು ಈ ವಿಚಾರವನ್ನು ದಕ್ಷಿಣ ಕನ್ನಡ ಬಿಜೆಪಿ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರು ರೈಲ್ವೆ ಇಲಾಖೆ ಸಚಿವರ ಗಮನಕ್ಕೂ ತಂದಿದ್ದರು.ಇದರ ಬೆನ್ನಲ್ಲೇ ರೈಲ್ವೆ ಖಾತೆ ರಾಜ್ಯ ಸಚಿವ ವಿ ಸೋಮಣ್ಣ ಅವರು ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ಜನಿವಾರ ಮಂಗಳಸೂತ್ರ ಸೇರಿದಂತೆ ಧಾರ್ಮಿಕ ಸಂಕೇತಗಳನ್ನು ತೆಗೆಯದಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿರುವ ಸಂಸದ ಬ್ರಿಜೇಶ್ ಚೌಟ ಅವರು ಧಾರ್ಮಿಕ ಸಂಕೇತಗಳಾದ ಮಂಗಳಸೂತ್ರ ಜನಿವಾರಗಳನ್ನು ತೆಗೆಯದಂತೆ ರೈಲ್ವೆ ಸಚಿವ ಈ ಸೋಮಣ್ಣ ಅಧಿಕಾರಿಗಳಿಗೆ ಸೂಚಿಸಿದ್ದಾರೆ



ಎಂದು ತಿಳಿಸಿದ್ದಾರೆ.ಸಿಇಟಿ ಪರೀಕ್ಷೆ ಸಂದರ್ಭದಲ್ಲಿ ವಿದ್ಯಾರ್ಥಿಗಳ ಜನಿವಾರ ತೆಗೆಸಿದ್ದು ದೊಡ್ಡ ಮಟ್ಟದ ಸುದ್ದಿಗೆ ಗ್ರಾಸವಾಗಿ ಬ್ರಾಹ್ಮಣ ಮಹಾಸಭಾ ಸೇರಿದಂತೆ ಎಲ್ಲರ ಖಂಡನೆಗೆ ಒಳಗಾಗಿತ್ತು ಈ ವಿವಾದ ಹೊಗೆಯಾಡುತ್ತಿರುವಾಗಲೇ ರೈಲ್ವೆ ನೇಮಕಾತಿ ಮಂಡಳಿ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ಮಂಗಳಸೂತ್ರ ಹಾಗೂ ಜನಿವಾರ ಧರಿಸಬಾರದು ಎಂದು ಹೇಳಿದ್ದು ಬಿಜೆಪಿಯನ್ನು ಮುಜುಗರಕ್ಕೆ ಸಿಲುಕಿಸಿತ್ತು ಇದರ ವಿರುದ್ಧ ಹಿಂದೂಪರ ಸಂಘಟನೆಗಳು ವ್ಯಾಪಕ ಆಕ್ರೋಶ ವ್ಯಕ್ತಪಡಿಸಿ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ಮಂಗಳಸೂತ್ರ ಜನಿವಾರ ತೆಗೆಸಿದಂತೆ ಆಗ್ರಹಿಸಿದ್ದವು

## ಇಂದು ಜಗಜೀವನ್ ರಾಮ್ ಹಾಗೂ ಅಂಬೇಡ್ಕರ್ ಜಯಂತಿ




ಯುವ ಮಾರ್ಗ ಸುದ್ದಿ

**ಮಾನ್ವಿ,ಏ.29–**ತಾಲೂಕಿನ ಜಾಗೀರ ಪನ್ನೂರು ಗ್ರಾಮದಲ್ಲಿ ಇಂದು ಬಾಬು ಜಗಜೀವನ್ ರಾಮ್ ಹಾಗೂ ಡಾ.ಬಿ.ಆರ್ ಅಂಬೇಡ್ಕರ್ ಜಯಂತಿ ಹಮ್ಮಿಕೊಳ್ಳಲಾಗಿದೆ ಎಂದು ಗ್ರಾಮ ಪಂಚಾಯಿತಿ ಸದಸ್ಯರಾದ ಸಂಪತ್ ರಾಜ್ ಹೇಳಿದರು. ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಜಯಂತಿ ಕಾರ್ಯಕ್ರಮದ ಸಾನಿಧ್ಯ ಸದಾಶಿವ ಮಹಾಸ್ವಾಮಿಗಳು ರುದ್ರಮುನೇಶ್ವರ ಮಠ ಚಿಕಲಪರ್ವಿ ಹಾಗೂ ಬರ್ತ ಲೋಮಿಯ ಸಹಾಯಕ ಗುರುಗಳು ಜಾಗೀರ ಪನ್ನೂರ್ ವಹಿಸಲಿದ್ದಾರೆ. ಕಾರ್ಯಕ್ರಮ ಉದ್ಘಾಟನೆಯನ್ನು ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಎನ್ ಎಸ್ ಬೋಸರಾಜ್

2ನೇ ಪುಟಕ್ಕೆ


## ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಅರ್ಥಪೂರ್ಣ ಆಚರಣೆಗೆ ನಿರ್ಧಾರ

ಯುವ ಮಾರ್ಗ ಸುದ್ದಿ

**ರಾಯಚೂರು,ಏ.29–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಮೇ.10ರಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಯಿತು.

ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ ಕುರಿತು ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು.

ಮೇ.10ರ ಬೆಳಿಗ್ಗೆ 11ಗಂಟೆಗೆ ಈ ಜಯಂತಿಯನ್ನು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮವನ್ನು ಆಯೋಜನೆ ಮಾಡಲು ನಿರ್ಧರಿಸಲಾಗಿದ್ದು, ಅವಶ್ಯಕ ಸಿದ್ಧತೆ ಮಾಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಶಿಷ್ಟಾಚಾರದ ಪ್ರಕಾರ ಆಮಂತ್ರಣ ಪತ್ರಿಕೆ, ವೇದಿಕೆ ನಿರ್ಮಾಣ ಸೇರಿದಂತೆ ಇತರೆ ಕಾರ್ಯಗಳನ್ನು ಅಚ್ಚುಕಟ್ಟಾಗಿ ಮಾಡಬೇಕು. ವಿವಿಧ



ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಹಾಜರಿರಬೇಕು. ಅಲ್ಲದೆ ಜಿಲ್ಲೆಯ ಎಲ್ಲ ಶಾಲಾ–ಕಾಲೇಜು, ಗ್ರಾಮ ಪಂಚಾಯತಿ ಹಾಗೂ ಸರ್ಕಾರಿ ಇತರೆ ಕಚೇರಿಗಳಲ್ಲಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ಕಡ್ಡಾಯವಾಗಿ ಆಚರಿಸಲು ಕ್ರಮಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.

ಸಮುದಾಯದ ಮಕ್ಕಳಿಗೆ ಶೈಕ್ಷಣಿಕ ಸಹಾಯ ಮಾಡಬೇಕು. ಜಯಂತಿಗಳನ್ನು ಆಚರಣೆ ಮಾಡುವುದು ಅವರ ಆಚಾರ

2ನೇ ಪುಟಕ್ಕೆ

## ಶಾಸಕ ಹಂಪಯ್ಯ ನಾಯಕರಿಂದ ಮೃತರ ಕುಟುಂಬಕ್ಕೆ ಆರ್ಥಿಕ ನೆರವು



ಯುವ ಮಾರ್ಗ ಸುದ್ದಿ

**ಸಿರವಾರ,ಏ.29–** ಸಿರವಾರ ತಾಲೂಕಿನ ಕೆ.ಗುಡದಿನ್ನಿ ಗ್ರಾಮದಲ್ಲಿ ಅಕಾಲಿಕ ಮಳೆಯಿಂದ ಮೃತಪಟ್ಟ ಸಾಯಣ್ಣ ಯಾದವ್ ಅವರ ಕುಟುಂಬವನ್ನು ಮಾನ್ವಿ ಶಾಸಕರಾದ ಜಿ.ಹಂಪಯ್ಯ ನಾಯಕ ಸಾಹುಕಾರ ಅವರು ಭೇಟಿ ಮಾಡಿ ಸಾಂತ್ವನ ಹೇಳಿದರು. ಇದೆ ವೇಳೆ ಶಾಸಕರು ಮೃತರ ಕುಟುಂಬಕ್ಕೆ 5 ಲಕ್ಷ ರೂಪಾಯಿಗಳ ಚೆಕ್ ವಿತರಿಸಿದರು.

ಅಲ್ಲದೆ ಮಳೆಯಿಂದ ಗಾಯಗೊಂಡ ಸಾಯಣ್ಣ ಯಾದವ್ ಅವರ ತಾಯಿ ಮತ್ತು ಸಂಬಂಧಿಕರು ಮಾನ್ವಿ ನಗರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಶಾಸಕರು ಆಸ್ಪತ್ರೆಗೆ ಭೇಟಿ ನೀಡಿ ಅವರ ಆರೋಗ್ಯ ವಿಚಾರಿಸಿದರು.

2ನೇ ಪುಟಕ್ಕೆ

ಜಾಲಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಿಂದ ಎನ್.ಎಸ್.ಎಸ್ ವಾರ್ಷಿಕ ವಿಶೇಷ ಶಿಬಿರ

## ವಿದ್ಯಾರ್ಥಿಗಳ ಪರಿಪೂರ್ಣ ವ್ಯಕ್ತಿತ್ವ ವಿಕಸನಕ್ಕಾಗಿ ಎನ್.ಎಸ್.ಎಸ್ ಶಿಬಿರ




ಯುವ ಮಾರ್ಗ ಸುದ್ದಿ

**ರಾಯಚೂರು,ಏ.29–** ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಸೇವಾ ಬದ್ಧತೆ ಮೂಡಿಸುವುದಕ್ಕೆ, ಪರಿಪೂರ್ಣ ವ್ಯಕ್ತಿತ್ವ ವಿಕಸನಕ್ಕಾಗಿ ಎನ್.ಎಸ್.ಎಸ್ ಶಿಬಿರ ನಡೆಯುತ್ತದೆ. ಪ್ರತಿಯೊಬ್ಬ ವಿದ್ಯಾರ್ಥಿ ಇದರ ಅನುಭವ ಪಡೆದುಕೊಳ್ಳಬೇಕೆಂದು ಮಸ್ಕಿಯ ದೇವನಾಂಪ್ರಿಯ ಅಶೋಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಸಹಾಯಕ ಪ್ರಾಧ್ಯಾಪಕರಾದ ಶಿವಗ್ಯಾನಪ್ಪ ಲಕ್ಕುಂದಿ ಅವರು ಹೇಳಿದರು.

ದೇವದುರ್ಗ ತಾಲೂಕಿನ ಜಾಲಹಳ್ಳಿಯ ದಿವಂಗತ ತಿಮ್ಮಪ್ಪ ದಿವಾನ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜ್ ವತಿಯಿಂದ ಹೆಚ್.ಸಿದ್ದಾಪೂರು ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದ್ದ 2024–25ನೇ ಸಾಲಿನ ವಾರ್ಷಿಕ ವಿಶೇಷ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು.

ಪಠ್ಯ ಶಿಕ್ಷಣ ಜತೆ ಸಮುದಾಯದ ಪರಿಚಯ, ಸೇವೆ ಮೂಲಕ ಸ್ವಚ್ಛತೆ ಅರಿವು, ನಮ್ಮಲ್ಲಿನ ಸಂಸ್ಕೃತಿ ಪ್ರದರ್ಶನಕ್ಕೆ ಸಾಂಸ್ಕೃತಿಕ ಕಾರ್ಯಕ್ರಮ, ಸಹ ಭೋಜನ, ಕ್ರೀಡೆ ಮೂಲಕ ಸಮಗ್ರತೆ ಪರಿಕಲ್ಪನೆ ಹೀಗೆ ಹಲವು ಚಿಂತನೆ ಸಾಕಾರಕ್ಕಾಗಿ ಶಿಬಿರ ನಡೆಯುತ್ತದೆ. ಅದನ್ನು ಅರ್ಥ ಮಾಡಿಕೊಂಡು ಎಲ್ಲ ಚಟುವಟಿಕೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕೆಂದರು.

ಉದ್ಯೋಗ ಪಡೆಯುವುದಕ್ಕೆ ಪಠ್ಯ ನೆರವಿಗೆ ಬಂದರೆ, ಜೀವನ ನಡೆಸುವುದಕ್ಕೆ ಪಠ್ಯೇತರ ಚಟುವಟಿಕೆ ಸಹಕಾರಿ ಆಗುತ್ತದೆ. ಶಿಬಿರದ ಪ್ರತಿಕ್ಷಣ ತಮ್ಮನ್ನು ತೊಡಗಿಸಿಕೊಳ್ಳಬೇಕು. ಆಗ ಸಾರ್ಥಕತೆ ಸಿಗುತ್ತದೆ ಎಂದರು.

2ನೇ ಪುಟಕ್ಕೆ

ಲೊಯೋಲ ಕಾಲೇಜಿನಲ್ಲಿ ಭಾರತ ಸಂವಿಧಾನದ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ

## ಜಾತಿ–ಜಾತಿಗಳ ಮಧ್ಯದ ತಾರತಮ್ಯ ಹೋಗಲಾಡಿಸಬೇಕಿದೆ : ಡಾ.ಇಸಾಬೆಲ್ಲಾ

ಯುವ ಮಾರ್ಗ ಸುದ್ದಿ

**ಮಾನ್ವಿ,ಏ.29–** ಲೊಯೋಲ ಕಾಲೇಜಿನಲ್ಲಿ ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗ ಹಾಗೂ ಆಂತರಿಕ ಗುಣಮಟ್ಟ ಭರವಸೆ ಕೋಶದ ಸಹಯೋಗದೊಂದಿಗೆ ಸೋಮವಾರ ಭಾರತ ಸಂವಿಧಾನದ ಕುರಿತು ಒಂದು ದಿನದ ರಾಷ್ಟ್ರೀಯ ಮಟ್ಟದ ವಿಚಾರ ಸಂಕಿರಣ ಯಶಸ್ವಿಯಾಗಿ ನಡೆಯಿತು.



ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ್ದ ಬೆಂಗಳೂರಿನ ಸಾಧನ ಮಹಿಳಾ ಸಹಾಯವಾಣಿ ಕೇಂದ್ರದ ಸಂಸ್ಥಾಪಕರು ಮತ್ತು ಮಹಿಳಾ ಹಕ್ಕುಗಳ ಹೋರಾಟಗಾರ್ತಿ ಡಾ.ಇಸಾಬೆಲ್ಲಾ ಝೇವಿಯರ್ ಅವರು ಮಾತನಾಡುತ್ತಾ, "ದೇಶಕ್ಕಾಗಿ ಒಂದೇ ಧರ್ಮ ಅದುವೇ ಮಾನವ ಧರ್ಮ ಆಗಿರಬೇಕು. ಸಮಾನತೆ, ಸ್ವಾಭಿಮಾನ, ಸ್ವಾತಂತ್ರ್ಯತೆ ಹಾಗೂ ಭ್ರಾತೃತ್ವ ಈ ಮೌಲ್ಯಗಳನ್ನು ನಮ್ಮ ದೇಶದ ಸಂವಿಧಾನವು ಒಳಗೊಂಡಿದೆ. ಜಾತಿ–ಜಾತಿಗಳ ಮಧ್ಯೆ ತಾರತಮ್ಯವನ್ನು ಹೋಗಲಾಡಿಸಬೇಕು ಮತ್ತು ಪ್ರತಿಯೊಬ್ಬ ಮನುಷ್ಯನು ಸ್ವತಂತ್ರವಾಗಿ ಬದುಕಬೇಕು" ಎಂದು ಅಭಿಪ್ರಾಯಪಟ್ಟರು. ಅಲ್ಲದೆ, ವಿದ್ಯಾರ್ಥಿಗಳು ಪ್ರತಿದಿನ ಮನೆಯಲ್ಲಿ ಸಂವಿಧಾನದ ಪೀಠಿಕೆಯನ್ನು ಓದುವಂತೆ ಕರೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಲೊಯೋಲ ಶಾಲೆಯ ಫಾ. ಸಿರಿಲ್ ರಾಜ್ ಅವರು ವಿದ್ಯಾರ್ಥಿಗಳಿಗೆ ಆದ್ಯತೆ, ಬಾಧ್ಯತೆ, ಸಾಧ್ಯತೆಗಳ ಕುರಿತು ಬದುಕಿನ ಅರಿವು, ಸಂವಿಧಾನದ ಮಹತ್ವ, ಜೀವನದ ಗುರಿ ಮತ್ತು ಸಾಮರಸ್ಯದ ಬಗ್ಗೆ ವಿಸ್ತಾರವಾಗಿ ಮಾತ ನಾಡಿ ದರು.ವಿಚಾರ ಸಂಕಿರಣದಲ್ಲಿ ಮೂರು ಗೋಷ್ಠಿಗಳನ್ನು ಆಯೋ ಜಿಸಲಾಗಿತ್ತು. ಮೊದಲ ಗೋಷ್ಠಿಯಲ್ಲಿ ಡಾ. ಮೋ ಹನ್‌ದಾಸ್ ಅವರು ಜಾತಿ, ಧರ್ಮ ಮತ್ತು ರಾಜಕಾರಣದ ಕುರಿತು ತಮ್ಮ ವಿಚಾರಗಳನ್ನು ಮಂಡಿಸಿದರು. ಎರಡನೇ ಗೋಷ್ಠಿಯಲ್ಲಿ ಡಾ. ಅಮರೇಶ್ ನುಗಡೋಣಿ

2ನೇ ಪುಟಕ್ಕೆ

ಮೊದಲನೇಯ ಪುಟದಿಂದ

# ಜಾತಿ–ಜಾತಿಗಳ ಮಧ್ಯೆದ ತಾರತಮ್ಯ ಹೋಗಲಾಡಿಸಬೇಕಿದೆ : ಡಾ.ಇಸಾಬೆಲಾ

ಅವರು ಮಾಧ್ಯಮ ಮತ್ತು ಸಮಾಜದ ಕುರಿತು ಮಾತನಾಡಿದರು. ಮೂರನೇ ಗೋಷ್ಠಿಯಲ್ಲಿ ಪ್ರೊ. ಶೈಲಜ ಹಿರೇಮಠ್ ಅವರು ಮಹಿಳೆ ಮತ್ತು ಕಾನೂನಿನ ವಿಷಯವನ್ನು ಕುರಿತು ವಿವರಿಸಿದರು.ಕಾರ್ಯಕ್ರಮದಲ್ಲಿ ಲೊಯೋಲ ಕಾಲೇಜಿನ ಪ್ರಾಚಾರ್ಯರಾದ ಫಾ.ವಿನೋದ್ ಪೌಲ್, ಸಂಸ್ಥೆಯ ಸಂಸ್ಥಾಪಕರಾದ ಫಾ.ಮ್ಯಕ್ಸಿಮ್ ರಸ್ಕೀನ್ಹಾ, ಭಾರತೀಯ ಸಾಮಾಜಿಕ ಸಂಸ್ಥೆಯ ಮುಖ್ಯಸ್ಥರಾದ ಫಾ.ಫ್ರಾನ್ಸಿಸ್ ಬಾಲರಾಜ್, ಕಾಲೇಜಿನ ಉಪ ಪ್ರಾಚಾರ್ಯರಾದ ಖಾಸಿಂ ಸಾಬ್, ಕಾರ್ಯಕ್ರಮದ ಸಂಯೋಜಕರಾದ ದ್ಯಾವಣ್ಣ, ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ವಿಠ್ಠಲ್ ಗಾವಡೆ, ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಜಾಕೀರ್ ಪಾಶ ಅವರು ಸೇರಿದಂತೆ ಚಿಂತಕರು, ಉಪನ್ಯಾಸಕರು, ಶಿಕ್ಷಕರು, ಸಂಶೋಧನಾರ್ಥಿಗಳು ಮತ್ತು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು

## ಹಂಪಯ್ಯ ನಾಯಕರಿಂದ ಮೃತರ ಕುಟುಂಬಕ್ಕೆ ಆರ್ಥಿಕ ನೆರವು

ಈ ಸಂದರ್ಭದಲ್ಲಿ ಸಿರವಾರ ತಾಲೂಕ ದಂಡಾಧಿಕಾರಿಗಳಾದ ರವಿ ಎಸ್. ಅಂಗಡಿ, ಕಾಂಗ್ರೆಸ್ ಮುಖಂಡರಾದ ವೈ. ಶರಣಪ್ಪ ನಾಯಕ, ಕೆ.ಗುಡದಿನ್ನಿ ನಾಗಪ್ಪ ಯಾದವ್, ವೈ.ರಮೇಶ್ ನಾಯಕ, ವೆಂಕಟೇಶ್ ಯಾದವ್, ಬಜ್ಜಣ್ಣ, ಡಾ.ಯುನುಸ್ ಹಾಗೂ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಪರಿಪೂರ್ಣ ವ್ಯಕ್ತಿತ್ವ ವಿಕಸನಕ್ಕಾಗಿ ಎನ್.ಎಸ್.ಎಸ್ ಶಿಬಿರ

ಕಲಿಕೆ ವಿದ್ಯಾರ್ಥಿ, ಶಿಕ್ಷ ಕರ ನಡುವಿನ ಕೊಂಡಿ ಆಗಿರದೆ ಸಮುದಾಯದ ನಡುವೆಯೂ ರಚನಾತ್ಮಕ ಸಂಬಂಧ ಏರ್ಪಡಬೇಕು ಎನ್ನುವ ಆಶಯದೊಂದಿಗೆ ಎನ್ಎಸ್ಎಸ್ ಶಿಬಿರ ನಡೆಸಲಾಗುತ್ತದೆ. ಗ್ರಾಮದ ಸ್ವಚ್ಛತೆ ಕೆಲಸದ ಜತೆ ಗ್ರಾಮೀಣರಲ್ಲಿ ಆರೋಗ್ಯ ಅರಿವು, ಮೌಢ್ಯತೆ ಹೋಗಲಾಡಿಸುವುದು, ಕಂದಾಚಾರಕ್ಕೆ ವಿರುದ್ಧವಾಗಿ ಯುವಕರ ಪ್ರೇರಣೆ ಹೀಗೆ ಹಲವು ಮಾರ್ಗದಲ್ಲಿ ಯುವ ಜನತೆ ತಮ್ಮನ್ನು ತೊಡಗಿಸಿಕೊಳ್ಳಬೇಕೆಂದರು.

ಇದೇ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಡಾ.ಪ್ರಕಾಶ್ ಬುದ್ದಿನ್ನಿ, ಈರನಗೌಡ, ಅರ್ಥಶಾಸ್ತ್ರ ಉಪನ್ಯಾಸಕರಾದ ಶಾಂತಗೌಡ ಪಾಟೀಲ್, ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿಗಳಾದ ಮುತ್ತಪ್ಪ, ಸೈಯ್ಯದ್ ಅಲಿ ಸೇರಿದಂತೆ ಶಿಬಿರಾರ್ಥಿಗಳು ಇದ್ದರು.

# ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಅರ್ಥಪೂರ್ಣ ಆಚರಣೆಗೆ ನಿರ್ಧಾರ

ವಿಚಾರದಾರೆಗಳನ್ನು ಯುವ ಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಆಗ ಜಯಂತಿಗಳನ್ನು ಆಚರಣೆ ಮಾಡಿದಕ್ಕೆ ಒಂದು ಅರ್ಥ ಬರುತ್ತದೆ ಎಂದು ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ದತ್ತಪ್ಪ ಸಾಗೂರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಸಭೆಯಲ್ಲಿ ಇದ್ದರು.

## ಜಗಜೀವನ್ ರಾಮ್ ಹಾಗೂ ಅಂಬೇಡ್ಕರ್ ಜಯಂತಿ

ಮಾಡಲಿದ್ದಾರೆ.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಜಿ ಹಂಪಯ್ಯ ನಾಯಕ ವಹಿಸಲಿದ್ದಾರೆ.ರಾಜ್ಯ ಸಂಯೋಜಕರು ಪ್ರದೇಶ ಕಾಂಗ್ರೆಸ್ ಸಮಿತಿಯ ಬಾಲ ಸ್ವಾಮಿ ಕೊಡ್ಲಿ ಮುಖ್ಯ ಭಾಷಣಕಾರರಾಗಿ ಆಗಮಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಹಾಗೂ ಮಾಜಿ ಶಾಸಕ ಗಂಗಾಧರ ನಾಯಕ ಇನ್ನು ಇತರರು ಗಣ್ಯರು ವಹಿಸಲಿದ್ದಾರೆ ಎಂದು ಹೇಳಿದರು ಈ ಸಂದರ್ಭದಲ್ಲಿ ಮಿಕೇಲಪ್ಪ ಪನ್ನೂರು, ಅಬ್ರಹಾಂ ಪನ್ನೂರು, ಯಮನಪ್ಪ ಪನ್ನೂರು, ಚಿನ್ನಪ್ಪ ಬಡಿಗೇರ್, ಬಲವಂತಪ್ಪ,ಪ್ರಕಾಶ್, ಹುಸೇನಪ್ಪ ಜಗಿಲಿ, ವಿರೇಶ ಇದ್ದರು.

# ದೇವದುರ್ಗದಲ್ಲಿ ಉದ್ಯಾನಗಳ ಅಭಿವೃದ್ಧಿಗೆ ನಾಗರಿಕ ವೇದಿಕೆಯ ಮನವಿ



ಯುವ ಮಾರ್ಗ ಸುದ್ದಿ

**ದೇವದುರ್ಗ,ಏ.29–** ದೇವದುರ್ಗ ಪುರಸಭೆ ಅಸ್ತಿತ್ವಕ್ಕೆ ಬಂದು ಏಳು ದಶಕಗಳು ಕಳೆದರೂ, ಪಟ್ಟಣದಲ್ಲಿ ಯಾವುದೇ ಸರ್ಕಾರಿ ಜಾಗದಲ್ಲಿ ಉದ್ಯಾನವನ್ನು ಅಭಿವೃದ್ಧಿಪಡಿಸದಿರುವುದು ಶೋಚನೀಯ ಸಂಗತಿಯಾಗಿದೆ ಎಂದು ದೇವದುರ್ಗ ನಾಗರಿಕ ವೇದಿಕೆ ಪುರಸಭೆ ಆಡಳಿತಕ್ಕೆ ಮನವಿ ಮಾಡಿದೆ.ಪಟ್ಟಣದಲ್ಲಿ 50ಕ್ಕೂ ಹೆಚ್ಚು ಲೇಔಟ್‌ಗಳು ಮತ್ತು ಬಡಾವಣೆಗಳು ಅನುಷ್ಠಾನಗೊಂಡಿದ್ದರೂ, ನಾಗರಿಕ ಸೌಲಭ್ಯಗಳಿಗಾಗಿ ಮೀಸಲಿಟ್ಟ ನಿವೇಶನಗಳಲ್ಲಿ ಇದುವರೆಗೆ ಒಂದೇ ಒಂದು ಉದ್ಯಾನವನ್ನು ಅಭಿವೃದ್ಧಿಪಡಿಸಿಲ್ಲ. ಕಲ್ಯಾಣ ಕರ್ನಾಟಕದಲ್ಲಿ ತೀವ್ರವಾದ ಬಿಸಿಲಿನಿಂದಾಗಿ ಪಟ್ಟಣದ ನಾಗರಿಕರು ತೊಂದರೆ ಅನುಭವಿಸುತ್ತಿದ್ದು, ನೆರಳಿಗಾಗಿ ರಸ್ತೆ ಬದಿಯ ಮರಗಳನ್ನು ಆಶ್ರಯಿಸುತ್ತಿದ್ದಾರೆ ಎಂದು ವೇದಿಕೆಯ ಹೋರಾಟಗಾರರು ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ, ನಾಗರಿಕ ವೇದಿಕೆಯು ಪುರಸಭೆ ಆಡಳಿತಕ್ಕೆ ಮನವಿ ಪತ್ರವನ್ನು ಸಲ್ಲಿಸಿದ್ದು, ಹೊಸದಾಗಿ ಅನುಷ್ಠಾನಗೊಂಡ ಬಡಾವಣೆಗಳು ಮತ್ತು ಪಟ್ಟಣದಲ್ಲಿ ಉದ್ಯಾನಗಳನ್ನು ಅಭಿವೃದ್ಧಿಪಡಿಸುವಂತೆ ಒತ್ತಾಯಿಸಿದೆ. ಅಲ್ಲದೆ, ದೇವದುರ್ಗ ಪಟ್ಟಣವನ್ನು ಹಸಿರೀಕರಣಗೊಳಿಸುವಂತೆ ಕೋರಿ ಸಸಿಗಳನ್ನು ಸಹ ಅರ್ಪಿಸಿದೆ.ಪುರಸಭೆ ಆಡಳಿತದ ಅಧಿಕಾರಿಗಳಾದ ಗಂಗಾಧರ್, ಪ್ರಕಾಶ್, ರಂಗಪ್ಪ ಕಂದಾಯ ನಿರೀಕ್ಷಕರು ಜಂಟಿಯಾಗಿ ನಾಗರಿಕರ ಮನವಿ ಪತ್ರವನ್ನು ಸ್ವೀಕರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರು, ಎಂ ಆರ್ ಎಚ್. ಎಸ್ ರಾಯಚೂರು, ಹನುಮಂತಪ್ಪ ಮನ್ನಾಪುರ್ , ನರಸಣ್ಣ ಗೌಡ ನಾಯಕ ರಾಜ್ಯ ಕಾರ್ಯದರ್ಶಿಗಳು, ಬಹು ಜನ ಸಮಾಜ ಪಾರ್ಟಿ, ರಂಗಪ್ಪ ಬಲಿದವ್ ಕೋತಿಗುಡ್ಡ, ರಾಘವೇಂದ್ರ ನಾಯಕ್ ಅಂಜಳ, ಹೊನ್ನಯ್ಯ ಗುಂಡಗುರ್ತಿ, ನಾಗರಾಜ್ ಸೋಮಕರ್, ಆಕಾಶ್ ಎಚ್., ಶಿವರಾಜ್ (ಅಧ್ಯಕ್ಷರು, ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ದೇವದುರ್ಗ) ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಮುಖಂಡರು, ಕನ್ನಡ ಮತ್ತು ಪರಿಸರ ಪ್ರೇಮಿಗಳು ಉಪಸ್ಥಿತರಿದ್ದರು.

# ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ನಿಂದ ಜಮ್ಮು ಕಾಶ್ಮೀರ ಘಟನೆ ಖಂಡನೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಏ.29–**ಇತ್ತೀಚೆಗೆ ಜಮ್ಮು ಕಾಶ್ಮೀರದ ಪೆಹಲ್ಗಾವ್ ನಲ್ಲಿ ಯಾತ್ರಿಕರ ಮೇಲೆ ನಡೆದ ಭಯೋತ್ಪಾದಕ ಹಲ್ಲೆಯನ್ನು ಖಂಡಿಸಿ ರಾಜ್ಯ ಮುಖ್ಯ ಆಯುಕ್ತರ ಸೂಚನೆಯಂತೆ ಮಾನ್ವಿ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ನ ವಿದ್ಯಾರ್ಥಿಗಳು ಮತ್ತು ದಳನಾಯಕ ನಾಯಕಿಯರು ಮೇಣದಬತ್ತಿ ಹಚ್ಚಿ ಮೃತ ಕುಟುಂಬಗಳಿಗೆ ಶಾಂತಿ ಕೋರಿದರು.

ಈ ಸಂದರ್ಭದಲ್ಲಿ ಈ ಘಟನೆಗೆ ಕಾರಣರಾದ ಯಾರೇ ಆಗಲಿ ಭಯೋತ್ಪಾದಕರನ್ನು ಕೇಂದ್ರ ಸರ್ಕಾರ ಬಿಡಬಾರದು ಅವರ ನಿರ್ನಾಮ ಮಾಡಬೇಕು. ಪಾಕಿಸ್ತಾನಕ್ಕೆ ಎಲ್ಲಾ ರೀತಿಯ ಸಹಾಯವನ್ನು ನಿಲ್ಲಿಸಬೇಕು. ಪ್ರಪಂಚದಲ್ಲಿ ಶಾಂತಿ ನೆಲೆಗೊಳ್ಳಬೇಕು. ಅಶಾಂತಿಗೆ ಮತ್ತು ಭಯೋತ್ಪಾದನೆಗೆ ಅವಕಾಶ ನೀಡಬಾರದು ಎಂದು ನಿಲುವನ್ನು ಪ್ರತಿಪಾದಿಸಿದರು. ಭಾರತ ಸ್ಕೌಟ್ ಮತ್ತು ಗೈಡ್ ಸಂಸ್ಥೆ ವಿದ್ಯಾರ್ಥಿಗಳಿಗೆ ಪ್ರಾಥಮಿಕ ಶಾಲೆಯ ದೆಸೆಯಿಂದಲೇ ಶಾಂತಿ, ಸೌಹಾರ್ದತೆ, ದೇಶಪ್ರೇಮ, ಸಮಾಜದಡೆಗೆ ವಿದ್ಯಾರ್ಥಿಗಳ ಕರ್ತವ್ಯ ಮುಂತಾದ ವಿಷಯಗಳ ಕುರಿತು ತಿಳುವಳಿಕೆ ನೀಡುತ್ತಾ ಬಂದಿದೆ. ಕನಿಷ್ಠ ಮುಂದಿನ ಪೀಳಿಗೆಯಾದರೂ ಶಾಂತಿಯುತ ಬದುಕನ್ನು ನಡೆಸಬೇಕೆಂದು ಎಲ್ಲರೂ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ನಗರದ ಬಿವಿಆರ್ ಶಾಲೆ, ಗುರುಕುಲಶಾಲಿ, ಕಾಕತೀಯ ಶಾಲೆ, ಮಾನ್ವಿ ಪಬ್ಲಿಕ್ ಸ್ಕೂಲ್, ಎಸ್ವಿಎಸ್ ಶಾಲೆ ಗಾಂಧಿ ಶಾಲೆ,ಕಲ್ಮಠ ಶಾಲೆ ಮಾನ್ವಿ,, ಸಿರವಾರದ ಶಾಂತಿನಿಕೇತನ ಶಾಲೆ, ಆ ಶಾಲೆಯ ಗೈಡ್ ಕ್ಯಾಪ್ಟನ್ ಅನುರಾಧ ಯು, ಕಾಕತಿಯ ಶಾಲೆಯ ಪರಿಮಳ, ಬಿವಿಯರ್ ಶಾಲೆಯ ಅಮ್ಜದ್, ಸುಷ್ಮಾ, ಸ್ಥಳೀಯ ಸಂಸ್ಥೆಯ ಅಧ್ಯಕ್ಷ ಬಲರಾಮಕೃಷ್ಣ, ಕಾರ್ಯದರ್ಶಿ ರಾಮಲಿಂಗಪ್ಪ, ಜಂಟಿ ಕಾರ್ಯದರ್ಶಿ ನರಸಿಂಹಮೂರ್ತಿ ದೇಸಾಯಿ, ಸಹ ಕಾರ್ಯದರ್ಶಿ ಬಸಲಿಂಗಪ್ಪ, ಸ್ಕೌಟ್ ಮಾಸ್ಟರ್ ಶಿವರಾಜಪ್ಪ ಸೇರಿದಂತೆ ಅನೇಕರು ಭಾಗವಹಿಸಿದದ್ದರು.

# ಶ್ರೀದೇವರ ದಾಸಿಮಯ್ಯನವರು ವಚನ ಚಳುವಳಿಗೆ ಪ್ರೇರಣೆ ನೀಡಿದ್ದರು–ಹಂಪಯ್ಯ ನಾಯಕ



ಯುವ ಮಾರ್ಗ ಸುದ್ದಿ

**ಮಾನ್ವಿ,ಏ.29–** ನೇಕಾರ ಸಮುದಾಯದ ಶರಣರಾದ ಶ್ರೀದೇವರ ದಾಸಿಮಯ್ಯನವರು ಅದ್ಯವಚನಕಾರರಾಗಿ 12 ನೇ ಶತಮಾನದಲ್ಲಿ ನಡೆದ ವಚನ ಚಳುವಳಿಗೆ ಪ್ರೇರಣೆ ನೀಡಿದ್ದರು. ಶ್ರೀದೇವರ ದಾಸಿಮಯ್ಯನವರ ವಚನಗಳಲ್ಲಿ ತಿಳಿಸಿದ ತತ್ವಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಂಡಲ್ಲಿ ನಮ್ಮ ಜೀವನ ಉತ್ತಮವಾಗಿರುತ್ತದೆ ನೇಕಾರ ಸಮುದಾಯವು ಸಮಾಜದಲ್ಲಿನ ಒಂದು ಸಣ್ಣ ಸಮುದಾಯವಾಗಿದ್ದರು ಕೂಡ ಉತ್ತಮ ಸಂಘಟನೆಯಿಂದ ಇತರ ಸಮಾಜಗಳಿಗೆ ಮಾದರಿಯಾಗಿದೆ ಎಂದು ಶಾಸಕ ಹಂಪಯ್ಯ ನಾಯಕ ಹೇಳಿದರು.ಪಟ್ಟಣದ ತೋಗಟವೀರ ಕ್ಷತ್ರೀಯ ಸಮಾಜದ ಶ್ರೀ ಚೌಡೇಶ್ವರಿ ದೇವಾಲಯದ ಆವರಣದಲ್ಲಿ ಕರ್ನಾಟಕ ರಾಜ್ಯ ನೇಕಾರ ಸಮುದಾಯಗಳ ಒಕ್ಕೂಟ ತಾಲೂಕು ಘಟಕದ ವತಿಯಿಂದ ನಡೆದ ಅದ್ಯ ವಚನಕಾರ ನೇಕಾರ ಸಂತ ಶರಣ ಶ್ರೀದೇವರ ದಾಸಿಮಯ್ಯನವರ ಜಯಂತಿ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನೇಕಾರ ಸಮುದಾಯಗಳ ಒಕ್ಕೂಟ ತಾಲೂಕು ಘಟಕದ ಅಧ್ಯಕ್ಷರಾದ ಕೆ.ಈ.ನರಸಿಂಹ ಮಾತನಾಡಿ, ರಾಜ್ಯದಲ್ಲಿ 29 ನೇಕಾರ ಸಮುದಾಯದ ಉಪಪಂಗಡಗಳಿದ್ದು ತಾಲೂಕಿನ ನೇಕಾರ ಸಮುದಾಯಗಳ ಒಕ್ಕೂಟದಲ್ಲಿ ತೊಗಟವೀರ, ದೇವಾಂಗ,ಕುರುಹಿ ನಶೆಟ್ಟಿ,ಪದ್ಮಶಾಲಿ, ಪಟ್ಟಸಾಲಿ,ಸಕುಳಸಾಲಿ ಹೀಗೆ 6 ಒಳಪಂಗಡಗಳು ಸೇರಿ ತಾಲೂಕಿನಲ್ಲಿ 3 ಸಾವಿರ ಜನಸಂಖ್ಯೆಯನ್ನು ಹೊಂದಿದ್ದು. ಎಲ್ಲಾ ನೇಕಾರ ಸಮುದಾಯಗಳು ಒಂದಾಗಿ ಸಂಘಟಿತರಾಗಬೇಕು ಮುಂದಿನ ದಿನಗಳಲ್ಲಿ ಸಮುದಾಯದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಪಟ್ಟಣದಲ್ಲಿ ಅಯೋಜಿಸಲಾಗುವುದು ಎಂದು ತಿಳಿಸಿದರು.

ರಾಜಾ ವೆಂಕಟಪ್ಪನಾಯಕ, ಪುರಸಭೆ ಅಧ್ಯಕ್ಷರಾದ ಲಕ್ಷ್ಮೀ ಡಿ.ವೀರೇಶ, ಜಿಲ್ಲಾಧ್ಯಕ್ಷ ಜಿ.ನಾಗರಾಜ, ಗಂಗಾಧರ ಮಸ್ಕಿ, ಬಿ.ವಿ. ಮಾರ್ಕಂಡೆಯ್ಯ, ವಿಜಯಲಕ್ಷ್ಮೀ, ಡಿ.ರಾಮದಾಸ್,ಜಿ. ಶಿವಶಂಕರ ಕುಮಾರ ಸಾಹುಕಾರ್, ಸರೋಜಾ,ಅನ್ನಪೂರ್ಣ ಗೂಡ, ಸುಮಂಗಲ ಸೇರಿದಂತೆ ಇನ್ನಿತರ ಗಣ್ಯರು ಭಾಗವಹಿಸಿದ್ದರು.

ಹಿರಿಯ ಸಾಹಿತಿ ರಮೇಶಬಾಬು ಯಾಳಗಿಯವರು ಶ್ರೀದೇವರ ದಾಸಿಮಯ್ಯನವರ ಕುರಿತು ಉಪನ್ಯಾಸ ನೀಡಿದರು. ತೊಗಟವೀರ,ದೇವಾಂಗ,ಕುರುಹಿನಶೆಟ್ಟಿ, ಪದ್ಮಶಾಲಿ,ಪಟ್ಟಸಾಲಿ,ಸಕುಳಸಾಲಿ ನೇಕರ ಸಮುದಾಯದ 25 ಕ್ಕೂ ಹೆಚ್ಚು ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಪಟ್ಟಣದ ಶ್ರೀ ದೇವರ ದಾಸಿಮಯ್ಯನವರ ವೃತ್ತದಿಂದ ಶ್ರೀಚೌಡೇಶ್ವರಿ ದೇವಸ್ಥಾನ, ತೋಗಟವೀರ ಕ್ಷತ್ರೀಯ ಸಮಾಜದ ಭವನದ ವರೆಗೆ ಶ್ರೀ ದೇವರ ದಾಸಿಮಯ್ಯನವರ ಭಾವಚಿತ್ರ ಭವ್ಯ ಮೆರವಣಿಗೆ ನಡೆಯಿತು.

ಜಿ.ರಾಮದಾಸ್,ಜಿ.ಶಿವಶಂಕರ ಕುಮಾರ ಸಾಹುಕಾರ, ಗಂಗಾಧರ ಮಸ್ಕಿ, ಪಿ.ವಿ. ಮಾರ್ಕಂಡೆಯ್ಯ, ರಮೇಶಬಾಬು ಯಾಳಗಿ, ಜಿ.ಪ್ರೇಮಶಂಕರಕುಮಾರ, ಹೆಚ್.ಟಿ,ಪ್ರಕಾಶಬಾಬು, ಜಿ.ಪ್ರಮೋದ ಕುಮಾರ, ಜಿ.ವೀರೇಶ, ನಾಗರಾಜಕೊಳ್ಳಿ, ಕೆ.ಅರುಣಕುಮಾರ ಸೇರಿದಂತೆ ಇನ್ನಿತರರು ಇದ್ದರು.

# ಬೈಕ್‌ಗೆ ಡಿಕ್ಕಿ ಹೊಡೆದು ಬಾವಿಗೆ ಬಿದ್ದ ವ್ಯಾನ್ 11 ಮಂದಿ ಸಾವು

**ಭೋಪಾಲ್, ಏ.29–** ಮಧ್ಯಪ್ರದೇಶದ ಮಂದಸೌರ್ ಜಿಲ್ಲೆಯಲ್ಲಿ ವೇಗವಾಗಿ ಬಂದ ವ್ಯಾನ್ ಬೈಕ್‌ಗೆ ಡಿಕ್ಕಿ ಹೊಡೆದ ಬಳಿಕ ನೀರು ತುಂಬಿದ ಬಾವಿಗೆ ಬಿದ್ದ ಪರಿಣಾಮ 11 ಮಂದಿ ಮೃತಪಟ್ಟಿದ್ದಾರೆ.ಮಂದಸೌರ್ ಜಿಲ್ಲೆಯ ನಾರಾಯಣಗಢ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.ವ್ಯಾನ್‌ನಲ್ಲಿ 13 ಮಂದಿ ಪ್ರಯಾಣಿಸುತ್ತಿದ್ದರು.

ಅಪಘಾತದಲ್ಲಿ ವ್ಯಾನ್‌ನಲ್ಲಿ ತೆರಳುತ್ತಿದ್ದ 9 ಮಂದಿ ಮೃತಪಟ್ಟಿದ್ದಾರೆ. ಇದಲ್ಲದೆ ರಕ್ಷಣೆಗಾಗಿ ಬಾವಿಗೆ ಇಳಿದ ಮನೋಹರ್ ಮತ್ತು ಬೈಕ್ ಸವಾರ ಸೇರಿ ಒಟ್ಟು 11 ಮಂದಿ ಮೃತಪಟ್ಟಿದ್ದಾರೆ ಎಂದು ರತ್ಲಂ ರೇಂಜ್ ಡಿಐಜಿ ಮನೋಜ್ ಸಿಂಗ್ ಹೇಳಿದ್ದಾರೆ.

ಮೃತದೇಹವನ್ನು ಬಾವಿಯಿಂದ ಹೊರತೆಗೆಯಬೇಕಾಗಿದೆ. ವ್ಯಾನ್ ಬೈಕ್‌ಗೆ ಡಿಕ್ಕಿ ಹೊಡೆದ ಬಳಿಕ ಚಾಲಕನ ನಿಯಂತ್ರಣ ತಪ್ಪಿ ಬಾವಿಗೆ ಬಿದ್ದಿದೆ. ಸ್ಥಳಕ್ಕೆ ಎನ್‌ಡಿಆರ್‌ಎಫ್ ತಂಡ ತೆರಳಿದ್ದು, ರಕ್ಷಣಾ ಕಾರ್ಯಾಚರಣೆ ನಡೆಸುತ್ತಿದೆ.



# ಪಾಕ್‌ನ 16 ಯೂಟ್ಯೂಬ್ ಚಾನೆಲ್ ನಿಷೇಧ

**ನವದೆಹಲಿ,ಏ.29–** ಸುಳ್ಳು ವರದಿ, ದಾರಿತಪ್ಪಿಸುವ ಮಾಹಿತಿ ಹಾಗೂ ವದಂತಿ ಹರಡುತ್ತಿದ್ದ ಆರೋಪದ ಮೇರೆಗೆ ಪಾಕಿಸ್ತಾನದ ವಾಹಿನಿಗಳೂ ಸೇರಿದಂತೆ 16 ಯೂಟೂಬ್ ಚಾನೆಲ್‌ಗಳನ್ನು ಕೇಂದ್ರ ಸರ್ಕಾರ ನಿಷೇಧಿಸಿ ಇಂದು ಆದೇಶ ಹೊರಡಿಸಿದೆ.ನಿಷೇಧಕ್ಕೆ ಒಳಗಾಗಿರುವ ವಾಹಿನಿಗಳು ಮತ್ತು ಯೂಟೂಬ್‌ಗಳು ಸುಳ್ಳು ಮಾಹಿತಿಯನ್ನು ಹರಡುವ ಮೂಲಕ ಜನರಲ್ಲಿ ಮತ್ತಷ್ಟು ಗೊಂದಲ ಮೂಡಿಸುತ್ತಿದ್ದವು.ಭಾರತ, ಭಾರತೀಯ ಸೇನೆ, ಭದ್ರತಾ ಪಡೆಗಳ ವಿರುದ್ಧ ಪ್ರಚೋದನಾಕಾರಿ ಹಾಗೂ ಕೋಮು ಸೂಕ್ಷ್ಮತೆಯ ವಿಷಯ ಪ್ರಸಾರ ಮಾಡಿದ್ದಕ್ಕೆ ಹಾಗೂ ಸುಳ್ಳು ಹಾಗೂ ದಾರಿತಪ್ಪಿಸುವ ಸುದ್ಧಿಗಳನ್ನು ಪ್ರಸಾರ ಮಾಡಿದ್ದಕ್ಕಾಗಿ 16 ಯೂಟ್ಯೂಬ್ ಪ್ರಸಾರಗಳನ್ನು ನಿಷೇಧಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.ಕೇಂದ್ರ ಗೃಹ ಇಲಾಖೆಯ ಶಿಫಾರಿಸ್ಸಿನ ಮೇಲೆ ಈ ಕ್ರಮ ಕೈಗೊಳ್ಳಲಾಗಿದೆ.ಇತ್ತೀಚೆಗೆ ಜಮ್ಮು– ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕ ದಾಳಿಯ ವರದಿಯನ್ನು ಬಿಬಿಸಿ ತಪ್ಪಾಗಿ ವರದಿ ಮಾಡಿದೆ. ಉಗ್ರಗಾಮಿಗಳ ಬದಲಿಗೆ ಬಂಡುಕೋರರು ಎಂದು ವರದಿ ಮಾಡಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಬಿಬಿಸಿಗೂ ಪತ್ರ ಬರೆದಿದೆ.ಪೆಹಲ್ಗಾಮ್ ದಾಳಿಯ ಬಳಿಕ ಪಾಕ್ ವಿರುದ್ಧ ಭಾರತ ರಾಜತಾಂತ್ರಿಕ ಸಮರ ಸಾರಿದೆ. ಈಗಾಗಲೇ ಹಲವು ಕಠಿಣ ಕ್ರಮಗಳನ್ನು ಕೈಗೊಂಡ ಬೆನ್ನಲ್ಲೇ ಪಾಕಿಸ್ತಾನದ ಕೇಂದ್ರ ಸರ್ಕಾರ ಇನ್ನಷ್ಟು ಚುರುಕು ಮುಟ್ಟಿಸಿದೆ.ಗೃಹ ವ್ಯವಹಾರ ಸಚಿವಾಲಯದ ಶಿಫಾರಸುಗಳ ಮೇರೆಗೆ, ಪ್ರಚೋದನಕಾರಿ ಮತ್ತು ಕೋಮು ಸೂಕ್ಷ್ಮ ವಿಷಯ, ಸುಳ್ಳು ಮತ್ತು ದಾರಿತಪ್ಪಿಸುವ ನಿರೂಪಣೆಗಳು ಮತ್ತು ತಪ್ಪು ಮಾಹಿತಿ ಪ್ರಸಾರ ಮಾಡಿದ್ದಕ್ಕಾಗಿ ಕೇಂದ್ರ ಸರ್ಕಾರ 16 ಯೂಟ್ಯೂಬ್ ವಾಹಿನಿಗಳನ್ನು ಭಾರತದಲ್ಲಿ ಬಂದ್ ಮಾಡಿ ಬಿಸಿ ಮುಟ್ಟಿಸಿದೆ.ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಭಯೋತ್ಪಾದಕರು ದಾಳಿ ನಡೆಸಿ 26 ಅಮಾಯಕರನ್ನು ಹತ್ಯೆ ಮಾಡಿದ ಪ್ರತೀಕಾರವಾಗಿ



ಕೇಂದ್ರ ಸರ್ಕಾರ, ಸಿಂಧು ನದಿ ನೀರಿನ ಒಪ್ಪಂದ ರದ್ದು, ದೇಶದಲ್ಲಿರುವ ಪಾಕಿಸ್ತಾನಿಯರ ವೀಸಾ ರದ್ದು ಸೇರಿದಂತೆ ಹಲವು ಬಿಗಿ ಕ್ರಮಗಳನ್ನು ಕೈಗೊಂಡ ಬಳಿಕ ಇದೀಗ ಪಾಕಿಸ್ತಾನದ ವಾಹಿನಿಗಳೂ ಮತ್ತು ಯೂಟೂಬ್‌ಗಳನ್ನು ನಿಷೇಧಿಸಿ ಆದೇಶ ಹೊರಡಿಸಿದೆ.ನಿಷೇಧಕ್ಕೆ ಒಳಗಾದ ಟಿವಿ ವಾಹಿನಿಯಲ್ಲಿ ಜಿಯೋ ನ್ಯೂಸ್, ಡಾನ್ ನ್ಯೂಸ್,ಎಆರ್ ವೈ ನ್ಯೂಸ್ ಸೇರಿದಂತೆ ಪ್ರಮುಖ ಹಾಗು ಅತಿ ಹೆಚ್ಚು ಚಂದಾದಾರರಿರುವ ಯೂಟ್ಯೂಬ್‌ಗಳನ್ನು ನಿಷೇಧಿಸಿದೆ.ಇನ್ನುಳಿದಂತೆ ಇರ್ಷಾದ್ ಭಟ್ಟಿ, ಸಾಮಾ ಟಿವಿ, ಬೋಲ್ ನ್ಯೂಸ್, ರಫ್ತಾರ್, ದಿ ಪಾಕಿಸ್ತಾನ್ ರೆಫೆರೆನ್ಸ್, ಸಾಮಾ ಸ್ಪೋಟ್ಸ್, ಜಿಎನ್ ಎನ್, ಉಜೈರ್ ಕ್ರಿಕೆಟ್, ಉಮರ್ ಚೀಮಾ ಎಕ್ಸೂಸೀವ್, ಅಸ್ಮಾ ಶಿರಜೈ, ಮನೀಬ್ ಫಾರೂಖ್, ಸುನೋ ನ್ಯೂಸ್ ಎಚ್.ಡಿ, ರಜಿ ನಾಮ ಸೇರಿದಂತೆ ಒಟ್ಟು 16 ವಾಹಿನಿ ಹಾಗು ಯೂಟ್ಯೂಬ್ ಚಾನೆಲ್ ಅನ್ನು ಭಾರತದಲ್ಲಿ ರದ್ದು ಮಾಡಿ ಕೇಂದ್ರ ಸರ್ಕಾರ ಆದೇಶ ಹೊರಡಿಸಿದೆ.ಭಯೋತ್ಪಾದನೆಯನ್ನು ಬೆಂಬಲಿಸುತ್ತಾ, ಉಗ್ರರಿಗೆ ನೆರವು ನೀಡುತ್ತಿರುವ ಆರೋಪದ ಮೇರೆಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಈ ಕಠಿಣ ಕ್ರಮ ಕೈಗೊಂಡಿದೆ.

# ಮೋದಿ –ರಾಜನಾಥ್ ಮಹತ್ವದ ಚರ್ಚೆ



**ನವದೆಹಲಿ, ಏ.29–** ಜಮ್ಮು ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಉಗ್ರರ ದಾಳಿ ಹಿನ್ನೆಲೆಯಲ್ಲಿ ಭದ್ರತಾ ಪಡೆಗಳು ಕೈಗೊಂಡ ಕಾರ್ಯಾಚರಣೆ ಸೇರಿದಂತೆ ಹಲವು ವಿಷಯಗಳ ಕುರಿತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ದೆಹಲಿಯಲ್ಲಿಂದು ಮಾಹಿತಿ ನೀಡಿದರು.ಮುಚ್ಚಿದ ಕೋಣೆಯಲ್ಲಿ ಸುಮಾರು 40 ನಿಮಿಷಗಳ ಕಾಲ ರಾಜನಾಥ್ ಸಿಂಗ್ ಅವರು ಜಮ್ಮು ಕಾಶ್ಮೀರದಲ್ಲಿ ಉಗ್ರರನ್ನು ಸದೆ ಬಡಿಯಲು ಕೈಗೊಂಡ ಕ್ರಮಗಳ ಕುರಿತು ಮಾಹಿತಿ ಹಂಚಿಕೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ.ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡುವ ಮೊದಲು, ರಾಜನಾಥ್ ಸಿಂಗ್ ಅವರು ಸಂಸತ್ ಭವನ್ ಸೌತ್ ಬ್ಲಾಕ್ ನಲ್ಲಿ ಕಾಶ್ಮೀರದ ನೆಲದ ಪರಿಸ್ಥಿತಿಯ ಬಗ್ಗೆ ಭದ್ರತಾ ಪಡೆಗಳ ಮುಖ್ಯಸ್ಥರು ಮಾಹಿತಿ ನೀಡಿದರು.ಏಪ್ರಿಲ್ 22 ರಂದು ಪೆಹಲ್ಗಾಮ್ ನಲ್ಲಿ 26 ನಾಗರಿಕರ ಸಾವಿಗೆ ಕಾರಣವಾದ ಭಯೋತ್ಪಾದಕ ದಾಳಿಯ ನಂತರ ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆಯುತ್ತಿರುವ ಕಾರ್ಯಾಚರಣೆಗಳು ಮತ್ತು ಭದ್ರತಾ ವ್ಯವಸ್ಥೆಗಳ ಕುರಿತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದರು.ಸುಮಾರು 40 ನಿಮಿಷಗಳ ಕಾಲ ನಡೆದ ಮಾತುಕತೆಯ ವೇಳೆ ಉಗ್ರರು ಮತ್ತು ಅವರ ಸಹಚರರ ಮನೆಗಳ ಮೇಲೆ ನಡೆಸಿದ ದಾಳಿ ಕುರಿತು ಮಾಹಿತಿ ನೀಡಿದರು.25 ಪ್ರವಾಸಿಗರು ಮತ್ತು ಒಬ್ಬ ಕಾಶ್ಮೀರಿ ಸ್ಥಳೀಯರನ್ನು ಕೊಂದ ಏಪ್ರಿಲ್ 22 ರ ಮುಷ್ಕರವು ಭಾರತದೊಳಗೆ ಮತ್ತು ಅಂತರಾಷ್ಟ್ರೀಯವಾಗಿ ವ್ಯಾಪಕ ಆಕ್ರೋಶ ಉಂಟುಮಾಡಿದೆ. ದಾಳಿಗೆ ಗಡಿಯಾಚೆಗಿನ ಸಂಪರ್ಕಗಳನ್ನು ಉಲ್ಲೇಖಿಸಿ, ಭಾರತೀಯ ಅಧಿಕಾರಿಗಳು ಬಲವಾದ ಮತ್ತು ನಿರ್ಣಾಯಕ ಪ್ರತಿಕ್ರಿಯೆ ನೀಡುತ್ತಿವೆ.ಮನ್ ಕಿ ಬಾತ್' ರೇಡಿಯೋ ಭಾಷಣದಲ್ಲಿ, ಪ್ರಧಾನಿ ಮೋದಿ ದೇಶಕ್ಕೆ ನ್ಯಾಯವನ್ನು ನೀಡಲಾಗುವುದು ಎಂದು ಭರವಸೆ ನೀಡಿದರು. "ಪಹಲ್ಗಾಮ್ ದಾಳಿಯ ದುಷ್ಕರ್ಮಿಗಳು ಮತ್ತು ಸಂಚುಕೋರರಿಗೆ ಕಠಿಣ ಪ್ರತಿಕ್ರಿಯೆಯೊಂದಿಗೆ ಸೇವೆ ಸಲ್ಲಿಸಲಾಗುವುದು" ಎಂದು ಅವರು ಭರವಸೆ ನೀಡಿದ್ದರು."ಭಯೋತ್ಪಾದನೆಯ ವಿರುದ್ಧದ ನಮ್ಮ ಹೋರಾಟದಲ್ಲಿ ಇಡೀ ಜಗತ್ತು 140 ಕೋಟಿ ಭಾರತೀಯರೊಂದಿಗೆ ನಿಂತಿದೆ. ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ಸಿಗುತ್ತದೆ ಮತ್ತು ನ್ಯಾಯ ಸಿಗುತ್ತದೆ ಎಂದು ನಾನು ಮತ್ತೊಮ್ಮೆ ಭರವಸೆ ನೀಡುತ್ತೇನೆ ಎಂದು ಹೇಳಿದ್ದಾರೆ.ಜಮ್ಮು ಮತ್ತು ಕಾಶ್ಮೀರದಾದ್ಯಂತ ಶಂಕಿತ ಭಯೋತ್ಪಾದಕರು ಮತ್ತು ಅವರ ಬೆಂಬಲಿಗರ ಜಾಲದ ವಿರುದ್ಧ ಉದ್ದೇಶಿತ ದಾಳಿಗಳನ್ನು ಪ್ರಾರಂಭಿಸಿವೆ

# ಯುದ್ಧಕ್ಕೆ ಭಾರತ ಸಿದ್ಧ –ಸಿಎಂ ಸಿದ್ದರಾಮಯ್ಯ ಪಾಕಿಸ್ತಾನದ ವಿರುದ್ಧ ಘರ್ಜನೆ

**ದೇವನಹಳ್ಳಿ , ಏ.28–** 'ಶಾಂತಿ ಬೋಧಿಸಿದ ಬುದ್ಧ, ಬಸವರ ನಾಡು ನಮದು. ಭಾರತವನ್ನು ಕೆಣಕಿದರೆ ಅದು ಪಾಕಿಸ್ತಾನವೇ ಆಗಲಿ, ಯಾವುದೇ ದೇಶವಾಗಲಿ ನಾವು ಸಹಿಸಲ್ಲ. ಯಾವುದೇ ಹಂತದ ಯುದ್ಧಕ್ಕೆ ಭಾರತ ಸದಾ ಸಿದ್ಧ, ಸದಾ ಸನ್ನದ್ಧ ಆಗಿರುತ್ತದೆ'ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ದೇವನಹಳ್ಳಿ ತಾಲ್ಲೂಕು ಭೈರದೇನಹಳ್ಳಿಯಲ್ಲಿ ಕೈಗಾರಿಕಾ ಪ್ರದೇಶದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾಪಂಚಾತ್ ವತಿಯಿಂದ ನಡೆದ ಸರ್ಕಾರದ ಎರಡು ವರ್ಷದ ಸಾಧನಾ ಸಮಾವೇಶದಲ್ಲಿ ಮಾತನಾಡಿದ ಅವರು, 'ಭಯೋತ್ಪಾದನೆಯನ್ನು ಬೇರು ಸಮೇತ ಕಿತ್ತು ಹಾಕುವುದು, ಪ್ರತಿಯೊಬ್ಬ ಭಾರತೀಯರಿಗೆ ಸೂಕ್ತ ರಕ್ಷಣೆ ಕೊಡುವುದು ನಮ ಆದ್ಯತೆಯಾಗಿದೆ. ಇದರಲ್ಲಿ ರಾಜಿ ಮಾಡಿಕೊಳ್ಳುವ ಪ್ರಶ್ನೆಯೇ ಇಲ್ಲ' ಎಂದು ಹೇಳಿದರು.

'ಭಾರತ ಬುದ್ಧ, ಬಸವಣ್ಣ, ಗಾಂಧಿ, ಅಂಬೇಡ್ಕರ್ ಅವರ ನಾಡು. ಇಲ್ಲಿ ಭಯೋತ್ಪಾದನೆಗೆ, ಅಶಾಂತಿಗೆ ಅವಕಾಶ ಇಲ್ಲ. ಅನಿವಾರ್ಯವಾದರೆ ಯುದ್ಧಕ್ಕೂ ಸಿದ್ಧ ಎನ್ನುವ ಮಾತನ್ನು ನಿನ್ನೆ ನಾನು ಹೇಳ್ದೆ ಆದರೆ ಭಯೋತ್ಪಾದಕರ ವಿರುದ್ಧ, ಪಾಕಿಸ್ತಾನದ ವಿರುದ್ಧ ಯುದ್ಧವೇ ಬೇಡ ಎಂದು ಹೇಳಿದ್ದೇನೆ ಎಂದು ಸುಳ್ಳು ಸುಳ್ಳೆ? ಬಿಜೆಪಿ ಪ್ರಚಾರ ಮಾಡುತ್ತಿದೆ. ನನ್ನ ಮಾತನ್ನು ತಿರುಚಿ ಯುದ್ಧವೇ ಬೇಡ ಎಂದು ಹೇಳಿದ್ದೇನೆ ಎಂದು ನನ್ನದಲ್ಲದ ಅಭಿಪ್ರಾಯವನ್ನು ತೋರಿಸುತ್ತಿದ್ದಾರೆ. ಇದು ತಪ್ಪು, ಇದಕ್ಕೆ ನಾನು ಹೊಣೆಗಾರನಲ್ಲ' ಎಂದು ತಿಳಿಸಿದರು.

'ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಾವಿರಾರು ಕೋಟಿ ವೆಚ್ಚದ ಕಾಮಗಾರಿಗಳಿಗೆ ಒಂದೇ ದಿನ ಚಾಲನೆ ನೀಡಿದ್ದೇವೆ. ಅಭಿವೃದ್ಧಿಗೆ ಹಣ ಇಲ್ಲ ಎನ್ನುವ ಬಿಜೆಪಿ ಪರಿವಾರದ ಸುಳ್ಳುಗಳಿಗೆ ಅಭಿವೃದ್ಧಿ ಮೂಲಕವೇ ಉತ್ತರ ನೀಡುತ್ತಿದ್ದೇವೆ. ಬಿಜೆಪಿ ಕನ್ನಡಕದ ಗಾಜುಗಳು ಅವರ ಅಧಿಕಾರಾವಧಿಯ ಕಲೆಗಳಿಂದ ಕೂಡಿದೆ. ಅದಕ್ಕೆ? ಅವರು ನೋಡುವ ಕಡೆಯಲ್ಲೆಲ್ಲಾ ಕಲೆಗಳೇ ಕಾಣುತ್ತಿವೆ.



ಬಿಜೆಪಿ ತನ್ನ ಕನ್ನಡಕ ಕ್ಲೀನ್ ಮಾಡಿಕೊಂಡರೆ ನಮ ಸರ್ಕಾರದ ಅಭಿವೃದ್ಧಿ ಕಾಣುತ್ತದೆ' ಎಂದು ನುಡಿದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ' ಗ್ಯಾರಂಟಿ ಯೋಜನೆಗಳಿಂದ ಬಡವರಿಗೆ, ಹಿಂದುಳಿದವರಗೆ, ಎಲ್ಲಾ ವರ್ಗದವರೆಗೂ ಅನುಕೂಲವಾಗಿದೆ. ಆದರೆ ವಿರೋಧ ಪಕ್ಷದವರು ಸುಖಾಸುಮನೆ ಪ್ರತಿಭಟನೆ ಮಾಡ್ತಿದ್ದಾರೆ. ಕುಟುಂಬದ ಯಶಸ್ಸು, ಜೀವನದ ಯಶಸ್ಸಿಗೆ ನಾವು ಗ್ಯಾರಂಟಿಗಳನ್ನು ನೀಡಿದ್ದೇವೆ. ಎತ್ತಿನಹೊಳೆ ನೀರನ್ನು ಬಯಲು ಸೀಮೆ ಪ್ರದೇಶಗಳಿಗೆ ಹಾಗೂ ಬೆಂಗಳೂರು ಗ್ರಾಮಾಂತರ ಗ್ರಾಮಾಂತರ ಜಿಲ್ಲೆಗೆ ಆದಷ್ಟು ಶೀಘ್ರ ಹರಿಸಲಾಗುವುದು ' ಎಂದು ತಿಳಿಸಿದರು.

'ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಯ ಅಭಿವದ್ಧಿ ಮತ್ತು ಪ್ರಗತಿಗೆ ನಮ ಸರ್ಕಾರ ನಿರಂತರವಾಗಿ ಅನುದಾನಗಳನ್ನು ನೀಡಿ, ಕಾರ್ಯಕ್ರಮಗಳನ್ನು ರೂಪಿಸಿ ಜಾರಿ ಮಾಡುತ್ತಿದೆ. ಚುನಾವಣೆ ವೇಳೆ ನಾವು ಕೊಟ್ಟ ಭರವಸೆಗಳನ್ನೆಲ್ಲಾ ಈಡೇರಿಸುತ್ತಲೇ ಇದ್ದೇವೆ. ಅಧಿಕಾರಕ್ಕೆ ಬಂದ ಬಳಿಕ ಮೊದಲ ಕ್ಯಾಬಿನೆಟ್ ನಲ್ಲೇ ಗ್ಯಾರಂಟಿಗಳನ್ನು ಜಾರಿ ಮಾಡಿ ಇದಕ್ಕಾಗಿ 80 ಸಾವಿರ ಕೋಟಿ ರೂಪಾಯಿಗಳನ್ನು ವೆಚ್ಚ ಮಾಡಿದ್ದೇವೆ ' ಎಂದು ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು.

# ಚೀನಿ ಸಂವಹನ ಸಾಧನ ಬಳಸಿದ ಪಹಲ್ಗಾಮ್ ದಾಳಿಯ ಉಗ್ರರು, ರೇಡಿಯೋ ಸಿಗ್ನಲ್ ಪತ್ತೆಗೆ ಮುಂದಾದ ಇಸ್ರೊ



**ನವದೆಹಲಿ,ಏ.29–** ಜಮು ಮತ್ತು ಕಾಶ್ಮೀರದ ಪಹಲ್ಗಾಮ್ ನಲ್ಲಿ ನರಮೇಧ ನಡೆಸಿದ ಭಯೋತ್ಪಾದಕರು ದಾಳಿಗೂ ಮುನ್ನ ಪಾಕಿಸ್ತಾನದ ಗಡಿಯುದ್ದಕ್ಕೂ ತಮ ನಿರ್ವಾಹಕರೊಂದಿಗೆ ಸಂವಹನ ನಡೆಸಲು ಚೀನಿ ಸಂದೇಶ ಕಳುಹಿಸುವ ಅಪ್ಲಿಕೇಶನ್‌ಗಳನ್ನು ಬಳಸುತ್ತಿದ್ದರು ಎಂಬ ಮಾಹಿತಿ ಲಭ್ಯವಾಗಿದೆ.

ಭಯೋತ್ಪಾದಕರು ದಾಳಿ ವೇಳೆ ತಮ ನಿರ್ವಾಹಕರೊಂದಿಗೆ ಸಂವಹನ ನಡೆಸಲು ಬಳಸ್ತಿದ್ದ ಈ ಚೀನಿ ಅಪ್ಲಿಕೇಶನ್‌ಗಳು ಅತ್ಯಂತ J£ïQæÜundefined ಆಗಿದ್ದು ಮತ್ತು ಭೇದಿಸಲು ಕಷ್ಟವೆಂದು ಹೇಳಲಾಗಿದೆ. 2020 ರ ಗಾಲ್ವಾನ್ ಘರ್ಷಣೆಯ ನಂತರ ಭಾರತದಲ್ಲಿ ಅವುಗಳನ್ನು ನಿಷೇಧಿಸಲಾಗಿದೆ. ಆದರೂ ಅದೇ ಆಪ್‌ಗಳನ್ನು ಭಯೋತ್ಪಾದಕರು ಬಳಸಿರುವುದು ತನೀಖೆಯಿಂದ ಬೆಳಕಿಗೆ ಬಂದಿದೆ.

ಪಹಲ್ಗಾಮ್ ದಾಳಿ ನಡೆದ ದಿನವೇ ಆ ಪ್ರದೇಶದಲ್ಲಿ ಒಂದು ಚೀನೀ ಉಪಗ್ರಹ ಫೋನ್ ಇರುವುದನ್ನು ಗುಪ್ತಚರ ಮೂಲಗಳು ಬಹಿರಂಗಪಡಿಸಿವೆ. ಇವೆರಡೂ ಪಹಲ್ಗಾಮ್ ಪಿತೂರಿಯನ್ನು ಪತ್ತೆಹಚ್ಚಲು ಮತ್ತು ಬಯಲು ಮಾಡಲು ಈಗ ಪ್ರಮುಖ ಸಂಸ್ಥೆಯಾಗಿರುವ ಎನ್‌ಐಎ ಸಾಬೀತುಪಡಿಸುತ್ತಿರುವ ತನಿಖೆಯ ಮಾರ್ಗಗಳಾಗಿವೆ.

ಪ್ರಸ್ತುತ ಲಷ್ಕರ್ ಮತ್ತು ಜೈಶ್ ನಂತಹ ಭಯೋತ್ಪಾದಕ ಗುಂಪುಗಳು ಬಳಸುವ ಸಂವಹನ ಸಾಧನಗಳು ಎನ್‌ಕ್ಷಿಣಟಿಜಜಜಿಟಿಜಜ ಮಾಡಲಾದ, ಪತ್ತೆ ಮತ್ತು ಡೇಟಾ ಮಾಹಿತಿಗಳನ್ನು ತಪ್ಪಿಸಲು ವಿನ್ಯಾಸಗೊಳಿಸಲಾದ ಮಿಲಿಟರಿ ದರ್ಜೆಯ ಸಾಧನಗಳಾಗಿವೆ. ಈ ವ್ಯವಸ್ಥೆಗಳನ್ನು ಸರ್ಕಾರಗಳು, ಮಿಲಿಟರಿಗಳು ಮತ್ತು ಕೆಲವೊಮೆ ಭಯೋತ್ಪಾದಕರು ಮತ್ತು ಕಾರ್ಟೆಲ್‌ಗಳು ಬಳಸುತ್ತವೆ. ಅದು ಬಿಟ್ಟು ಈ ಸಾಧನಗಳನ್ನು ಬಳಸಲು ಮತ್ಯಾರು ಬಳಸುವುದಿಲ್ಲ.

ಎಂಡ್–ಟು–ಎಂಡ್ ಎನ್‌ಕ್ರಿಪ್ಶನ್ ಸಂದೇಶಗಳನ್ನು ಸ್ಕ್ರಾಂಬಲ್ ಮಾಡಲಾಗುತ್ತದೆ ಆದ್ದರಿಂದ ಕಳುಹಿಸುವವರು ಮತ್ತು ಸ್ವೀಕರಿಸುವವರು ಮಾತ್ರ ಅವುಗಳನ್ನು ಡಿಕೋಡ್ ಮಾಡಬಹುದು.

ಕ್ವಾಂಟಮ್–ರೆಸಿಸ್ಟೆಂಟ್ ಅಲ್ಗಾರಿದಮ್‌ಗಳು: ಕ್ವಾಂಟಮ್ ಕಂಪ್ಯೂಟರ್‌ಗಳು ಸಹ ಭೇದಿಸಲು ಸಾಧ್ಯವಾಗದ ಸುಧಾರಿತ ಎನ್‌ಕ್ರಿಪ್ಶನ್. ಸ್ಟೆಗನೋಗ್ರಫಿ, ಚಿತ್ರಗಳು ಮತ್ತು ವೀಡಿಯೊಗಳಂತಹ ಸೂಕ್ಷ್ಮ ಫೈಲ್‌ಗಳಲ್ಲಿ ಸಂದೇಶಗಳನ್ನು ಮರೆಮಾಡುವುದು. ಈ ತಂತ್ರಜ್ಞಾನಗಳು ಪತ್ತೆಹಚ್ಚುವಿಕೆಯನ್ನು ತಪ್ಪಿಸಲು ಮಿಲಿಸೆಕೆಂಡುಗಳಲ್ಲಿ ಡೇಟಾವನ್ನು ಕಳುಹಿಸುವ ಬರ್ಸ್ಟ್ ಟ್ರಾನ್ಸ್ ಮಿಟರ್‌ಗಳ ಮೂಲಕ ಕಾರ್ಯನಿರ್ವಹಿಸುತ್ತವೆ. ಇದರಲ್ಲಿ ಜ್ಯಾಮಿಂಗ್ ಅಥವಾ ಕದ್ದಾಲಿಕೆ ತಪ್ಪಿಸಲು ರೇಡಿಯೋ ಆವರ್ತನಗಳನ್ನು ತ್ವರಿತವಾಗಿ ಬದಲಾಯಿಸುವುದು ಸೇರಿದೆ.

ಸ್ಥಳೀಯ ಮೂಲಸೌಕರ್ಯವನ್ನು ಬೈಪಾಸ್ ಮಾಡಲು ಉಪಗ್ರಹ ಫೋನ್‌ಗಳು ಇರಿಡಿಯಮ್‌ನಂತಹ ನೆಟ್‌ವರ್ಕ್‌ಗಳನ್ನು ಬಳಸುತ್ತವೆ. ಹಿಂದಿನ ದುರ್ಬಲತೆಗಳನ್ನು ಎದುರಿಸಲು ಹೊಸ ಸಾಧನಗಳನ್ನು ಬಳಸಲಾಗುತ್ತದೆ. ಐಸಿಸ್ ಹಿಂದೆ ಟೆಲಿಗ್ರಾಮ್ ಅನ್ನು ಅವಲಂಬಿಸಿತ್ತು ಆದರೆ ಮೆಟಾಡೇಟಾ ವಿಶ್ಲೆ?ಷಣೆಯ ನಂತರ ಬದಲಾಯಿತು. ಅಲ್–ಖೈದಾ ಅಶ್ಲೀಲ ತಾಣಗಳಲ್ಲಿ ಸ್ಟೆಗನೋಗ್ರಫಿಯನ್ನು ಬಳಸಿತು, ಇದನ್ನು 2000 ರ ದಶಕದಲ್ಲಿ ಎಫ್‌ಬಿಐ ಭೇದಿಸಿತು. ಕಾಶಿ?ರಿ ಉಗ್ರಗಾಮಿಗಳನ್ನು ಭಾರತೀಯ ಏಜೆನ್ಸಿಗಳು ತುರಾಯ ಉಪಗ್ರಹ ಫೋನ್‌ಗಳು ಮತ್ತು ವಾಟ್ಸಾಪ್ ಗುಂಪುಗಳನ್ನು ಬಳಸಿಕೊಂಡು ತಡೆದವು.

ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ಅವರು ಪಾಕಿಸ್ತಾನದ ಉಪ ಪ್ರಧಾನ ಮಂತ್ರಿ ಮತ್ತು ವಿದೇಶಾಂಗ ಸಚಿವ ಮುಹಮದ್ ಇಶಾಕ್ ದಾರ್ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸುವುದರೊಂದಿಗೆ ಚೀನಾ ಪಾಕಿಸ್ತಾನಕ್ಕೆ ತನ್ನ ಬೆಂಬಲವನ್ನು ತೋರಿಸಿದೆ. ಈ ಕರೆಯ ಸಮಯದಲ್ಲಿ, ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಬಗ್ಗೆ ಚೀನಾ ಕಳವಳ ವ್ಯಕ್ತಪಡಿಸಿತು ಮತ್ತು ನಿಷ್ಪಕ್ಷಪಾತ ತನಿಖೆಗೆ ಕರೆ ನೀಡಿದೆ.

ಪಾಕಿಸ್ತಾನದ ವಿದೇಶಾಂಗ ಸಚಿವಾಲಯವು ಘಿ ನಲ್ಲಿ ನೀಡಿದ ಹೇಳಿಕೆಯಲ್ಲಿ ಸಂಭಾಷಣೆಯನ್ನು ದೃಢಪಡಿಸಿದೆ. ಚೀನಾ ಭಾರತದ ಏಕಪಕ್ಷೀಯ ಮತ್ತು ಕಾನೂನುಬಾಹಿರ ಕ್ರಮಗಳನ್ನು ಹಾಗೂ ಪಾಕಿಸ್ತಾನದ ವಿರುದ್ಧದ ಅದರ ಆಧಾರ ರಹಿತ ಪ್ರಚಾರವನ್ನು ತಿರಸ್ಕರಿಸಿದೆ ಎಂದು ಡಾರ್ ಹೇಳಿದರು.

# ಅಂತರರಾಜ್ಯ ಕುಖ್ಯಾತ ಕಳ್ಳನ ಬಂಧಿಸಿ 30 ಲಕ್ಷ ರೂ.ಮೌಲ್ಯದ 412 ಗ್ರಾಂ.ಚಿನ್ನಾಭರಣ ವಶ

**ಕಲಬುರಗಿ,ಏ.28–**ಇಲ್ಲಿನ ಅಶೋಕನಗರ ಪೊಲೀಸರು ಕಾರ್ಯಾಚರಣೆ ನಡೆಸಿ ಅಂತರರಾಜ್ಯ ಕುಖ್ಯಾತ ಕಳ್ಳನೊಬ್ಬನನ್ನು ಬಂಧಿಸಿ 30 ಲಕ್ಷ ರೂ.ಮೌಲ್ಯದ 412 ಗ್ರಾಂ.ಚಿನ್ನಾಭರಣ ವಶ ಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು.

ನಗರದ ಕಮೀಷನರ್ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತ ಈ ವಿಷಯ ತಿಳಿಸಿದ ಅವರು, ಇಲ್ಲಿನ ಭಾಗ್ಯವಂತಿ ನಗರದ ಶಂಕರಗೌಡ ಬಮಶೆಟ್ಟಿ ಎಂಬುವವರ ಮನೆ ಬೀಗ ಮುರಿದು 14.60 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಲಾಗಿತ್ತು. ಈ ಸಂಬಂಧ ಶಂಕರಗೌಡ ಅವರು ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು.

ಈ ದೂರಿನ ಅನ್ವಯ ಪ್ರಕರಣದ ತನಿಖೆಗೆ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್ ಅವರ ಮಾರ್ಗದರ್ಶನದಲ್ಲಿ ದಕ್ಷಿಣ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಭೂತೇಗೌಡ ವಿ.ಎಸ್.ಅವರ ನೇತೃತ್ವದಲ್ಲಿ ಅಶೋಕ ನಗರ ಪೊಲೀಸ್ ಠಾಣೆ ಪಿಐ ಅರುಣಕುಮಾರ, ಸಿಬ್ಬಂದಿಗಳಾದ ವೈಜಿನಾಥ, ಮಲ್ಲಿಕಾರ್ಜುನ ಮೇತ್ರಿ, ನೀಲಕಂಠರಾಯ ಪಾಟೀಲ, ಶಿವಲಿಂಗ, ಚಂದ್ರಶೇಖರ, ಸುಭಾಷ, ಚನ್ನವೀರೇಶ, ಅನುಜಾ ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು.



ಅಶೋಕನಗರ ಪೊಲೀಸ್ ಠಾಣೆ ಪಿಐ ಅರುಣಕುಮಾರ ಅವರು ಸಿಬ್ಬಂದಿಗಳೊಂದಿಗೆ ರಾತ್ರಿ ಗಸ್ತು ಮೇಲ್ವಿಚಾರಣೆಯಲ್ಲಿದ್ದಾಗ ರಾಮ ಮಂದಿರ ಹತ್ತಿರವಿರುವ ಮಾನಕರ ಲೇಔಟ್‌ನಲ್ಲಿ ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ಶಿವಪ್ರಸಾದ ಅಲಿಯಾಸ್ ಮಂತ್ರಿ ಶಂಕರ ತಂದೆ ಆದಿನಾರಾಯಣ ಮಂತ್ರಿ (56) ಎಂಬಾತನನ್ನು ವಿಚಾರಣೆಗೆ ಒಳಪಡಿಸಿದಾಗ ಅಶೋಕನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಭಾಗ್ಯವಂತಿ ನಗರದಲ್ಲಿನ ಮನೆ ಕಳ್ಳತನ ಸೇರಿದಂತೆ ಅಶೋಕನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ರಾತ್ರಿ ವೇಳೆ 9 ಕಳ್ಳತನ ಪ್ರಕರಣ, ಹಗಲು ವೇಳೆ 1 ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿರುವುದಾಗಿ ಬಾಯಿ ಬಿಟ್ಟಿದ್ದಾನೆ.

# ಏಷ್ಯಾ ದೇಶಗಳ ನಡುವೆ ಜವಾಬ್ದಾರಿಯುತ ಪರಿಹಾರ ಅಗತ್ಯ: ಟ್ರಂಪ್

**ವಾಷಿಂಗ್ಟನ್, ಏ,29–** ಕಾಶ್ಮೀರದಲ್ಲಿ ಇತ್ತೀಚೆಗೆ ನಡೆದ ಉಗ್ರಗಾಮಿ ದಾಳಿಯ ನಂತರ ಎರಡು ಏಷ್ಯಾದ ರಾಷ್ಟ್ರಗಳ ನಡುವೆ ಉದ್ವಿಗ್ನತೆ ಹೆಚ್ಚಿರುವುದರಿಂದ "ಜವಾಬ್ದಾರಿಯುತ ಪರಿಹಾರ" ಕಂಡುಕೊಳ್ಳುವುದು ಅವಶ್ಯ ಎಂದು ಅಮೆರಿಕಾ ಹೇಳಿದೆ.ತಮ್ಮೊಂದಿಗೆ ಭಾರತ ಮತ್ತು ಪಾಕಿಸ್ತಾನ ಎರಡರೊಂದಿಗೂ ಸಂಪರ್ಕದಲ್ಲಿದೆ ಎಂದು ಅಮೆರಿಕ ವಿದೇಶಾಂಗ ಇಲಾಖೆ ತಿಳಿಸಿದ್ದು ಎರಡೂ ದೇಶಗಳು ಚರ್ಚೆ ನಡೆಸಿ ಪರಿಹಾರ ಕಂಡುಕೊಳ್ಳಬೇಕಾಗಿದೆ ಎಂದು ತಿಳಿಸಿದೆ.ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ದಾಳಿ ನಡೆದ ನಂತರ ಅಮೆರಿಕ ಸರ್ಕಾರ ಭಾರತಕ್ಕೆ ಬೆಂಬಲ ವ್ಯಕ್ತಪಡಿಸಿದೆ ಆದರೆ ಪಾಕಿಸ್ತಾನವನ್ನು ಟೀಕಿಸಿಲ್ಲ. ಏಪ್ರಿಲ್ 22 ರಂದು ಭಾರತದ ಆಡಳಿತದ ಕಾಶ್ಮೀರದಲ್ಲಿ ನಡೆದ ದಾಳಿಯಲ್ಲಿ ಎರಡು ಡಜನ್‌ಗೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಎಂದು ಭಾರತ ಪಾಕಿಸ್ತಾನವನ್ನು ದೂಷಿಸಿದೆ. ಪಾಕಿಸ್ತಾನ ಜವಾಬ್ದಾರಿ ನಿರಾಕರಿಸಿ ತಟಸ್ಥ ತನಿಖೆಗೆ ಒತ್ತಾಯಿಸಿದೆ.ಅಮೆರಿಕಾ ವಿದೇಶಾಂಗ ಇಲಾಖೆಯ ವಕ್ತಾರರು ಪ್ರತಿಕ್ರಿಯಿಸಿ "ಇದು ಬದಲಾಗುತ್ತಿರುವ ಪರಿಸ್ಥಿತಿ ಮತ್ತು ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದೇವೆ. ಭಾರತ ಮತ್ತು ಪಾಕಿಸ್ತಾನ ಸರ್ಕಾರಗಳೊಂದಿಗೆ ಬಹು ಹಂತಗಳಲ್ಲಿ ಸಂಪರ್ಕದಲ್ಲಿದ್ದೇವೆ" ಎಂದು ಹೇಳಿಕೆಯಲ್ಲಿ ತಿಳಿಸಿದೆ.ಪೆಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಅಮೆರಿಕಾ ಖಂಡಿಸುತ್ತದೆ. ಈ ವಿಷಯದಲ್ಲಿ ಭಾರತದ ಬೆಂಬಲಕ್ಕೆ ಅಮೆರಿಕಾ ನಿಲ್ಲಲಿದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಇತ್ತೀಚೆಗೆ ಮಾಡಿದ ಹೇಳಿಕೆಗಳಿಗೆ ಹೋಲುವ ಹೇಳಿಕೆಗಳನ್ನು ಪುನರುಚ್ಚರಿಸಿದೆ.2021 ರಲ್ಲಿ ನೆರೆಯ ಅಫ್ಘಾನಿಸ್ತಾನದಿಂದ ಅಮೆರಿಕ ಹಿಂದೆ ಸರಿದ ನಂತರ ವಾಷಿಂಗ್ಟನ್‌ಗೆ ಪಾಕಿಸ್ತಾನದ ಪ್ರಾಮುಖ್ಯತೆ ಕಡಿಮೆಯಾದರೂ, ಏಷ್ಯಾದಲ್ಲಿ ಚೀನಾದ ಹೆಚ್ಚುತ್ತಿರುವ ಪ್ರಭಾವ ಎದುರಿಸಲು ಅಮೆರಿಕಾ ಗುರಿ ಹೊಂದಿರುವುದರಿಂದ ಭಾರತ, ಅಮೆರಿಕದ ಹೆಚ್ಚು ಪ್ರಮುಖ ಪಾಲುದಾರ ರಾಷ್ಟ್ರವಾಗಿದೆ.

ಯುವ ಮಾರ್ಗ

ಮಂಗಳವಾರ: 29–04–2025

# ಉಗ್ರರ ದಾಳಿ ಖಂಡಿಸಿ ಮೇಣದಬತ್ತಿ ಹಿಡಿದು ಪ್ರತಿಭಟನೆ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಏ.29–** ಕಾಶ್ಮೀರದ ಪಹಲ್ಗಾಮ್ ಬಳಿಯ ಬೈಸರನ್ ಕಣಿವೆಯಲ್ಲಿ ಅಮಾಯಕರ ಮೇಲೆ ಉಗ್ರರು ನಡೆಸಿದ ಗುಂಡಿನ ದಾಳಿ ವಿರೋಧಿಸಿ ಪಟ್ಟಣದ ಗಡಿಯಾರ ಚೌಕದಿಂದ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಲ್ ರವರಿಗೆ ಮೇಣದಬತ್ತಿ ಹಿಡಿದು ಕಾಂಗ್ರೆಸ್ ಮುಖಂಡರು ಪ್ರತಿಭಟನೆ ಮೆರವಣಿಗೆ ನಡೆಸಿದರು.




ಈ ಸಂದರ್ಭದಲ್ಲಿ ಗ್ಯಾರಂಟಿ ಜಿಲ್ಲಾ ಅಧ್ಯಕ್ಷ ಪಾಮಯ್ಯ ಮುರಾರಿ, ನಗರ ಪ್ರಾಧಿಕಾರ ಅಧ್ಯಕ್ಷ ಭೂಪನಗೌಡ ಪಾಟೀಲ್ ಕರಡಕಲ್, ಪುರಸಭೆ ಸದಸ್ಯರಾದ ಪ್ರಮೋದ್ ಕುಲಕರ್ಣಿ, ಸೋಮನಗೌಡ ಕರಡಕಲ್, ಮೌಲಸಾಬ ಮುಖಂಡರಾದ, ಅನೀಶ ಪಾಷ, ಗುಂಡಪ್ಪ ನಾಯಕ, ಬಸವರಾಜ ಗೌಡ ಗಣೇಕಲ್, ಅಮರೇಶ ನಾಡಗೌಡ, ಎಂ ಜಿಲಾನಿ, ಕುಮಾರಸ್ವಾಮಿ, ವಿಜಯಕುಮಾರ್, ಶರಣಪ್ಪ ವಾರದ್, ಶಶಿಧರ ಆಶಿಹಾಳ, ಇಬ್ರಾಹಿಂ ಖುರೇಶ್ ಸೇರಿದಂತೆ ಕಾರ್ಯಕರ್ತರು ಇದ್ದರು.

# ಸಿಡಿಲು ಬಡಿದು ಮನೆ ಭಸ್ಮ – ಶಾಸಕ ಜಿ.ಹಂಪಯ್ಯ ನಾಯಕ್‌ರಿಂದ ವೈಯಕ್ತಿಕ ಪರಿಹಾರ



ಯುವ ಮಾರ್ಗ ಸುದ್ದಿ

**ಮಾನ್ವಿ,ಏ.29–**ತಾಲೂಕಿನ ಮಾನ್ವಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಾನ್ವಿ ನಗರದ ಪುರಸಭೆ ವ್ಯಾಪ್ತಿಯ ವಾರ್ಡ್ ನಂಬರ್ 9ರ ಸೋನಿಯಾ ಗಾಂಧಿ ಕಾಲೋನಿಯಲ್ಲಿ ಸುರಿದ ಗಾಳಿ ಮಳೆಗೆ ಸಿಡಿಲು ಬಡಿದು ಅಂಬರೀಶ್ ತಂದೆ ಬಾಲಪ್ಪ ಎಂಬುವವರ ಮನೆ ಸಂಪೂರ್ಣವಾಗಿ ಬೆಂಕಿಗಾಹುತಿಯಾಗಿದೆ. ಘಟನೆಯ ವಿಷಯ ತಿಳಿದ ತಕ್ಷಣ ಶಾಸಕರಾದ ಜಿ.ಹಂಪಯ್ಯ ನಾಯಕ್ ಸಾಹುಕಾರ್ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಂತ್ರಸ್ತ ಕುಟುಂಬದವರ ದುಃಖವನ್ನು ಆಲಿಸಿದ ಶಾಸಕರು, ಕೂಡಲೇ ತಮ್ಮ ವೈಯಕ್ತಿಕ ಪರಿಹಾರವನ್ನು ವಿತರಿಸಿದರು. ಅಲ್ಲದೇ ಸ್ಥಳದಲ್ಲಿದ್ದ ಕಂದಾಯ ನಿರೀಕ್ಷಕರಾದ ಚರಣ್ ಸಿಂಗ್ ಠಾಕೂರ್ ಅವರಿಗೆ ತಕ್ಷಣವೇ ಪಂಚನಾಮೆ ವರದಿಯನ್ನು ತಯಾರಿಸಿ ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಈ ಕುಟುಂಬಕ್ಕೆ ತಲುಪಿಸುವಲ್ಲಿ ನೆರವಾಗುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ದೂರವಾಣಿ ಮೂಲಕ ಮಾನ್ವಿ ತಾಲೂಕ ದಂಡಾಧಿಕಾರಿಗಳೊಂದಿಗೆ ಮಾತನಾಡಿದ ಶಾಸಕರು, ಸರ್ಕಾರದಿಂದ ಮಂಜೂರಾಗುವ ಪರಿಹಾರವನ್ನು ಆದಷ್ಟು ಬೇಗನೆ ಸಂತ್ರಸ್ತ ಕುಟುಂಬಕ್ಕೆ ತಲುಪಿಸುವ ವ್ಯವಸ್ಥೆ ಮಾಡುವಂತೆ ತಿಳಿಸಿದರು. ಈ ಸಂದರ್ಭದಲ್ಲಿ ರವಿ ಪುಟ್ಟು, ರವಿಕುಮಾರ್,ಸತ್ತರ, ಬಂಗ್ಲೆವಾಲೆ ವಾರ್ಡಿನ ನಿವಾಸಿಗಳು ಉಪಸ್ಥಿತರಿದ್ದರು.

# ಟಿಎಪಿಸಿಎಂಎಸ್ ಜೋಳ ಖರೀದಿ ಕೇಂದ್ರದಲ್ಲಿ ವಿಳಂಬ; ಜಿಲ್ಲಾಧಿಕಾರಿಗೆ ಮನವಿ



ಯುವ ಮಾರ್ಗ ಸುದ್ದಿ

**ಮಾನ್ವಿ,ಏ.29–**ತಾಲೂಕಿನ ಟಿಎಪಿಸಿಎಂಎಸ್ ಜೋಳ ಖರೀದಿ ಕೇಂದ್ರದಲ್ಲಿ ಮುಂಗಾರು ಹಂಗಾಮಿನ ಜೋಳ ಖರೀದಿ ಪ್ರಕ್ರಿಯೆ ನಿಧಾನಗತಿಯಲ್ಲಿ ನಡೆಯುತ್ತಿದೆ. ಅಲ್ಲದೆ, ಖರೀದಿಸಿದ ಜೋಳವನ್ನು ಗೋಧಾಮುಗಳಿಗೆ ಸಾಗಿಸಲು ಸಾಗಾಣಿಕೆ ಗುತ್ತೇದಾರರಿಂದ ಅಗತ್ಯ ಲಾರಿಗಳ ಪೂರೈಕೆಯಿಲ್ಲದ ಕಾರಣ ರೈತರು ವಾರಗಟ್ಟಲೆ ಕಾಯುವಂತಾಗಿದೆ.

ಈ ಕುರಿತು ಮಾಜಿ ಶಾಸಕರಾದ ಗಂಗಾಧರ ನಾಯಕ್ ಹಾಗೂ ಬಸನಗೌಡ ಬ್ಯಾಗವಾಟ ಅವರ ನೇತೃತ್ವದಲ್ಲಿ ರೈತ ಮುಖಂಡರು ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಿದರು. ಮನವಿಯಲ್ಲಿ, ಕೂಡಲೇ ಸಾಗಾಣಿಕೆ ಗುತ್ತೇದಾರರಿಗೆ ಅಗತ್ಯ ಲಾರಿಗಳನ್ನು ಒದಗಿಸುವಂತೆ ನಿರ್ದೇಶನ ನೀಡಲು ಕೋರಿದರು.

ಈ ಸಂದರ್ಭದಲ್ಲಿ ಮಂಡಲ ಪ್ರಧಾನ ಕಾರ್ಯದರ್ಶಿ ವಿಶ್ವನಾಥ್ ವಕೀಲರು, ಮಾನ್ವಿ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಕುಮಾರಸ್ವಾಮಿ, ಯುವ ಮೋರ್ಚಾ ಅಧ್ಯಕ್ಷ ರವಿಕುಮಾರ್ ಪಾಟೀಲ್, ಉಮಾಪತಿ ನಾಯಕ್, ಟಿಎಪಿಸಿಎಂಎಸ್ ಅಧ್ಯಕ್ಷ ತಿಮ್ಮಾರೆಡ್ಡಿ ಭೋಗಾವತಿ, ಮಲ್ಲನಗೌಡ ವಕೀಲರು, ಮಲ್ಲಿಕಾರ್ಜುನ ಪೋತ್ನಾಳ್ ರಾಯಪ್ಪ ವಕೀಲರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಜನಿವಾರ, ಮಂಗಳಸೂತ್ರ ತೆಗೆಸುವುದು ಸರಿಯಲ್ಲ



**ಬೆಂಗಳೂರು, ಏ.29–** ಈ ಬಿಜೆಪಿಯವರು ಹೇಳುವುದು ಒಂದು ಮಾಡುವುದು ಇನ್ನೊಂದು. ಇದೇ ಅವರ ಮುಖವಾಡ. ರೈಲ್ವೆ ಪರೀಕ್ಷೆಯಲ್ಲಿ ಮಂಗಳಸೂತ್ರ, ಜನಿವಾರ ತೆಗೆಯಬೇಕು ಎಂದು ಹೇಳಿರುವುದು ಸರಿಯಲ್ಲ. ಇದನ್ನು ಹಿಂಪಡೆಯಬೇಕು" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಆಗ್ರಹಿಸಿದರು.ಸದಾಶಿವನಗರದ ನಿವಾಸದ ಬಳಿ ಸುದ್ದಿಗಾರರಿಗೆ ಮಾತನಾಡಿದ ಉಪಮುಖ್ಯಮಂತ್ರಿಯ ಡಿಕೆ ಶಿವಕುಮಾರ್ ಶಿವಕುಮಾರ್ ಅವರು "ಧಾರ್ಮಿಕ ಸಂಕೇತಗಳಾಗಿ ಕಿವಿಯಲ್ಲಿ ಓಲೆ, ಮೂಗೂತಿ, ಮಂಗಳಸೂತ್ರ, ಜನಿವಾರ, ಉಡುದಾರ, ಹಣೆಬೊಟ್ಟು ಇರುತ್ತದೆ. ಇವುಗಳನ್ನು ಪರಿಶೀಲನೆ ಮಾಡಲಿ. ಆದರೆ ಅದನ್ನು ತೆಗೆಸುವುದು ಸರಿಯಲ್ಲ. ಈ ಹಿಂದೆ ಸಣ್ಣ, ಸಣ್ಣ ಉಪಕರಣಗಳನ್ನು ಬಳಸಿ ಪರೀಕ್ಷಾ ಅಕ್ರಮ ಎಸೆದ ಉದಾಹರಣೆಗಳನ್ನು ನೋಡಿದ್ದೇವೆ. ಇದರ ವಿರುದ್ಧ ಜನರೇ ಆಕ್ರೋಶ ವ್ಯಕ್ತಪಡಿಸಬೇಕು" ಎಂದರು.

# ಸಿಡಿಲಿಗೆ ಮನೆ ಹಾನಿ,ಆಕಳು ಸಾವು



ಯುವ ಮಾರ್ಗ ಸುದ್ದಿ

**ಮಾನ್ವಿ,ಏ.29–ಪಟ್ಟಣದ 9ನೇ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಸೋನಿಯಾಗಾಂಧಿ ನಗರದಲ್ಲಿನ ಅಮರೇಶ ತಂದೆ ನರಸಪ್ಪ ಎನ್ನುವವರ ಮನೆಗೆ ಭಾನುವಾರ ಮಧ್ಯಾಹ್ನ ಸಿಡಿಲು ಬಡಿದ್ದು ಮನೆಯಲ್ಲಿನ ನಿತ್ಯ ಬಳಕೆಯ ವಸ್ತುಗಳು ,ಬಂಗಾರ, ನಗದು ಹಣ ಸೇರಿ ಅಪಾರ ನಷ್ಟ ಉಂಟಾಗಿದ್ದು ಸ್ಥಳಕ್ಕೆ ತಹಸೀಲ್ದಾರ್ ಭೀಮರಾಯ ರಾಮಸಮುದ್ರ ಹಾಗೂ ಕಂದಾಯ ನಿರೀಕ್ಷಕರಾದ ಚರಣಸಿಂಗ್ ಠಾಕೂರ್ ಸೇರಿದಂತೆ ಕಂದಾಯ ಇಲಾಖೆಯ ಅಧಿಕಾರಿಗಳು ,ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿ ತನಿಖೆ ಕೈಗೊಂಡಿದ್ದಾರೆ.**

**ಅದೇ ರೀತಿ ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿನ ಮಿಟ್ಟಿಮೇಲೆ ಕ್ಯಾಂಪ್‌ನಲ್ಲಿ ಮದ್ಯಾಹ್ನಬಂದಸಿಡಿಲುಸಹಿತ ಮಳೆಗೆ ರೈತ ನರಸಪ್ಪ ರವರ ಆಕಳು ಬಲಿಯಾದ ಘಟನೆ ನಡೆದಿದ್ದು. ನೀರಮಾನ್ವಿ ಗ್ರಾಮದಲ್ಲಿನ ಮಿಟ್ಟಿಮೇಲೆ ಕ್ಯಾಂಪ್‌ನಲ್ಲಿ ಭಾನುವಾರ ಮದ್ಯಾಹ್ನ ಬಂದ ಮಳೆ ಹಾಗೂ ಸಿಡಿಲಿಗೆ ರೈತರ ಆಕಳು ಸಾವನ್ನಾಪಿದ್ದು ಕಂದಯ ಇಲಾಖೆಯ ಗ್ರಾಮಲೆಕ್ಕಾಧಿಕಾರಿ ಚಂದ್ರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಮಾಹಿತಿ ಪಡೆದರು.**



# ವಿಶ್ವ ಮಲೇರಿಯಾ ದಿನ ಆಚರಣೆ

ಯುವ ಮಾರ್ಗ ಸುದ್ದಿ

**ರಾಯಚೂರು,ಏ.29–**ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಯಂತ್ರಣ ವಿಭಾಗ ರಾಯಚೂರು ಹಾಗೂ ತಾಲುಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಮಲೇರಿಯಾ ದಿನಾಚರಣೆ ಅಂಗವಾಗಿ ಇತ್ತಿಚೇಗೆ ನಗರದ ಪ್ರಮುಖ ರಸ್ತೆಗಳಲ್ಲಿ ಜಾಥಾವನ್ನು ಜರುಗಿಸಲಾಯಿತು.

ಈ ವೇಳೆ ತಾಲೂಕು ವಿಬಿಡಿ ತಾಂತ್ರಿಕ ಮೇಲ್ವಿಚಾರಕರಾದ ಸಂಧ್ಯಾ ನಾಯಕ ಅವರು ಮಾತನಾಡಿ, ಸೊಳ್ಳೆ ನಿಯಂತ್ರಣ ಕ್ರಮಗಳು ಮನೆಯೊಳಗೆ ಮತ್ತು ಮೇಲ್ಚಾವಣಿಯ ನೀರಿನ ತೊಟ್ಟಿಗಳಲ್ಲಿನ ನೀರನ್ನು ವಾರಕ್ಕೊಮ್ಮೆ ನೀರನ್ನು ಖಾಲಿ ಮಾಡಿ, ಉಜ್ಜಿ, ಒಣಗಿಸಿ ಮತ್ತೆ ತುಂಬುವುದು ಭದ್ರವಾಗಿ ಮುಚ್ಚಳಿಕೆಯಿಂದ ಮುಚ್ಚುವುದು, ಮನೆಯ ಒಳಗೆ ಹಾಗೂ ಹೊರಗೆ ಯಾವುದೇ ಕಾರಣಕ್ಕೂ ಮಳೆ ನೀರು ನಿಲ್ಲದಂತೆ ಎಚ್ಚರ ವಹಿಸಬೇಕು. ಒಡೆದ ಬಾಟಲಿ, ಟಿನ್, ಟೈರು, ತೆಂಗಿನ ಚಿಪ್ಪು, ಇತ್ಯಾದಿಗಳಲ್ಲಿ ನೀರು ಸಂಗ್ರಹವಾಗದಂತೆ ನೋಡಿಕೊಳ್ಳಬೇಕು ಮತ್ತು ಚರಂಡಿಗಳಲ್ಲಿ ನೀರು ನಿಲ್ಲದಂತೆ ಎಚ್ಚರವಹಿಸಬೇಕು ಎಂದರು.

ಚಳಿಯೊಂದಿಗೆ ನಡುಕ, ತಲೆನೋವು, ತೀವ್ರ ಜ್ವರ, ವಾಕರಿಕೆ, ಬಾಯಾರಿಕೆ, ವಿಪರೀತ ಬೆವರುವಿಕೆ, ಸುಸ್ತು. ಇತ್ಯಾದಿಗಳ ಬಗ್ಗೆ ತಿಳಿಸಿದರು. ರಕ್ತದ ಪರೀಕ್ಷೆಯಿಂದ (ರಕ್ತ ಲೇಪನ ಹಾಗೂ ರ್‍ಯಾಪಿಡ್ ಡೈಯಾಗ್ನೋಸ್ಟಿಕ್ ಕಿಟ್ ಆರ್.ಡಿ.ಕೆ) ಮಲೇರಿಯ ದೃಢಪಡಿಸಲಾಗುತ್ತದೆ. ಪ್ಲಾಸ್ಮೋಡಿಯಂ ವೈವಾಕ್ಸ್ ಪ್ಲಾಸ್ಮೋಡಿಯಂ ಫಾಲ್ಸಿಫಾರಂ ಇದು ಅತ್ಯಂತ ಅಪಾಯಕಾರಿಯಾಗಿರುತ್ತದೆ. ರೋಗ ಪತ್ತೆಹಚ್ಚುವ ಮತ್ತು ಚಿಕಿತ್ಸೆಯ ಸೌಲಭ್ಯಗಳು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಲಭ್ಯವಿರುತ್ತದೆ. ಮಲೇರಿಯಾ ನಮ್ಮೊಂದಿಗೆ ಕೊನೆಗೊಳ್ಳುತ್ತದೆ ಮರು ಹೂಡಿಕೆ ಮಾಡಿ, ಮರು ಕಲ್ಪನೆ, ಮರು ಉತ್ತೇಜನ ನೀಡೋಣ ಎಂಬುದು ಈ ವರ್ಷದ ಘೋಳಣೆ ಎಂದರು.




ಇದೇ ಸಂದರ್ಭದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಾನಯ್ಯ, ಎಲ್‌ಟಿಓ ಜಿಲ್ಲಾ ಹಿರಿಯ ನೋಡೆಲ್ ಅಡಿವೆಪ್ಪ, ಆರೋಗ್ಯ ನರೀಕ್ಷಣಾಧಿಕಾರಿ ಅಶೋಕ ಪಾಟಿಲ್, ಮಹೇಶ ಎಂ, ಸಾಲ್ವಿನ ಜಿ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಪಿಹೆಚ್‌ಸಿಓ, ಎಸ್‌ಕೆಇ ಪ್ಯಾರಾಮೇಡಿಕಲ್ ಕಾಲೇಜಿನ ಪ್ರಾಂಶುಪಾಲರು, ವಿದ್ಯಾರ್ಥಿಗಳು ಹಾಗೂ ಆಶಾ ಕಾರ್ಯಕರ್ತೆಯರು ಇದ್ದರು.

## ಶ್ರೀಭಗೀರಥ ಜಯಂತಿ ಪೂರ್ವಭಾವಿ ಸಭೆ

# ಅದ್ದೂರಿಯಾಗಿ ಆಚರಿಸಲು ಅಗತ್ಯ ಕ್ರಮಕ್ಕೆ ಸೂಚನೆ: ಎಡಿಸಿ ಶಿವಾನಂದ



ಯುವ ಮಾರ್ಗ ಸುದ್ದಿ

**ರಾಯಚೂರು,ಏ.29–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮೇ.04ರಂದು ಶ್ರೀಭಗೀರಥ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಆಚರಣೆಗೆ ಅಗತ್ಯ ಕ್ರಮಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಇತ್ತಿಚೇಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀಭಗೀರಥ ಜಯಂತಿ ಆಚರಣೆ ಅಂಗವಾಗಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸರಕಾರದಿಂದ ಆಚರಿಸಲಾಗುವ ಭಗೀರಥ ಜಯಂತಿಯನ್ನು ಆಯೋಜಿಸಲು ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಬೇಕು. ಹೆಚ್ಚಿನ ಜನರು ಆಗಮಿಸುವ ಹಿನ್ನೆಲೆಯಲ್ಲಿ ಅಗತ್ಯ ಏರ್ಪಾಡುಗಳನ್ನು ಕೈಗೊಳ್ಳಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಕಳೆದ ಬಾರಿ ಭಗೀರಥ ಜಯಂತಿಯನ್ನು ಅತ್ಯಂತ ಅದ್ದೂರಿಯಾಗಿ ಆಚರಣೆ ಮಾಡಲಾಗಿದೆ. ಈ ಬಾರಿಯೂ ಇನ್ನಷ್ಟು ಉತ್ತಮವಾಗಿ ಕಾರ್ಯಕ್ರಮ ಆಯೋಜನೆ ಮಾಡಲಾಗುವುದು. ಆಹ್ವಾನ ಪತ್ರಿಕೆ ಮುದ್ರಿಸಿ ವಿತರಣೆಗೆ ಕ್ರಮವಹಿಸಿಬೇಕು. ವೇದಿಕೆಯನ್ನು ಅಚ್ಚುಕಟ್ಟಾಗಿ ನಿರ್ಮಾಣ ಮಾಡಿ ಹೂ ಅಲಂಕಾರ ಮಾಡಬೇಕು. ಹೆಚ್ಚು ಜನರು ಕುಳಿತು ಕಾರ್ಯಕ್ರಮ ವೀಕ್ಷಿಸಲು ಅನುಕೂಲವಾಗುವಂತೆ ಶಾಮಿಯಾನ, ಆಸನದ ವ್ಯವಸ್ಥೆಗಳನ್ನು ಮಾಡಬೇಕು. ಜಯಂತಿ ಕಾರ್ಯಕ್ರಮದಲ್ಲಿ ಯಾವುದೇ ಕೊರತೆಯಾಗದಂತೆ ನೋಡಿಬೇಕೆಂದು ರಾಯಚೂರು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಸೂಚಿಸಿದರು. ಈ ವೇಳೆ ಸಭೆಯಲ್ಲಿ ಹಾಜರಿದ್ದ ಸಮಾಜದ ಮುಖಂಡರು ವಿವಿಧ ಸಲಹೆಗಳನ್ನು ನೀಡಿದರು.




**ಮಾನ್ವಿ; ಪಟ್ಟಣದ ಬಸವ ವೃತ್ತದಲ್ಲಿ ಜೆಡಿಎಸ್ ಪಕ್ಷದ ವತಿಯಿಂದ ಕಾಶ್ಮಿರದಲ್ಲಿ ಹತ್ಯಗೊಳಗಾದ 26 ಜನರ ಅತ್ಮ ಶಾಂತಿಗಾಗಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ನೇತೃತ್ವದಲ್ಲಿ ನೂರಾರು ಕಾರ್ಯಕರ್ತರು ಮೇಣದ ಬತ್ತಿ ಹಚ್ಚಿ ಸಂತಾಪ ಸಲ್ಲಿಸಿದರು.**

# ನರೇಗಾ ಕೆಲಸಕ್ಕೆ ತೆರಳಿದ್ದ ಮಹಿಳೆ ಕುಸಿದು ಬಿದ್ದು ಸಾವು

**ಕಲಬುರಗಿ,ಏ.29–** ಉದ್ಯೋಗ ಖಾತರಿ ಯೋಜನೆ ಅಡಿ ಕೆಲಸಕ್ಕೆ ತೆರಳಿದ್ದ ಮಹಿಳೆಯೊಬ್ಬರು ದಿಢೀರನೆ ಕುಸಿದು ಬಿದ್ದು ಸಾವನ್ನಪ್ಪಿದ ಘಟನೆ ಸೇಡಂ ತಾಲೂಕಿನ ಮುಧೋಳ ಗ್ರಾಮದಲ್ಲಿ ನಡೆದಿದೆ.ರಾಮುಲಮ್ಮ ನಾಡೆಪಲ್ಲಿ (46) ಮೃತಪಟ್ಟ ಕಾರ್ಮಿಕ ಮಹಿಳೆ. ಭಾನುವಾರ ಬೆಳಗ್ಗೆ 8 ಗಂಟೆಗೆ ಉದ್ಯೋಗ ಖಾತ್ರಿ ಕೂಲಿ ಕೆಲಸಕ್ಕೆ ಬಂದಿದ್ದ ರಾಮುಲಮ್ಮ ಇದ್ದಕ್ಕಿದ್ದಂತೆ ಕುಸಿದು ಬಿದ್ದಿದ್ದಾರೆ. ಸ್ಥಳದಲ್ಲಿದ್ದ ಇತರ ಕೂಲಿ ಕಾರ್ಮಿಕರು ತಕ್ಷಣ ಆಕೆಯ ಮುಖಕ್ಕೆ ನೀರು ಚಿಮುಕಿಸಿ ಎಚ್ಚರಗೊಳಿಸುವ ಪ್ರಯತ್ನ ಮಾಡಿದ್ದಾರೆ. ಆದರೆ ರಾಮುಲಮ್ಮ ಸ್ಪಂದಿಸದೆ ಕೊನೆಯುಸಿರೆಳೆದಿದ್ದಾರೆ. ತೀವ್ರ ಹೃದಯಾಘಾತದಿಂದ ಸಾವು ಸಂಭವಿಸಿರಬಹುದು ಎಂದು ಹೇಳಲಾಗುತ್ತಿದೆ. ಮುಧೋಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**